ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೧

# ಪಟ್ಟಿ – ೧೦

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಸೋಮವಾರ, ದಿನಾಂಕ : ೧೬ನೇ ಮಾರ್ಚ್, ೨೦೨೦

---

## ಸಮೂಹ – I

೧. ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೨. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೪. ವೈದ್ಯಕೀಯ ಶಿಕ್ಷಣ ಸಚಿವರು.

೫. ಅರಣ್ಯ ಸಚಿವರು.

೬. ಕಾರ್ಮಿಕ ಮತ್ತು ಸಕ್ಕರೆ ಸಚಿವರು.

---

## ಬೀದರ್ ಜಿಲ್ಲೆಯಲ್ಲಿ ನವಿಲು ಧಾಮ ಆರಂಭಿಸುವ ಕುರಿತು

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೯೨೮ (೧೦೭೮) ಮಾನ್ಯ ಅರಣ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೀದರ್ ಜಿಲ್ಲೆಯಲ್ಲಿ ಬ್ಲಾಕ್‌ಬಕ್ (ಜಿಂಕೆ) ಹಾಗೂ ನವಿಲು ಧಾಮ ಆರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ; ಇಲ್ಲವಾದಲ್ಲಿ, ಇದಕ್ಕೆ ಕಾರಣವೇನು ?

## ಬೀದರ್ ಬ್ರೀಮ್ಸ್ ಕಾಲೇಜಿನಲ್ಲಿ ನಡೆದ ಅವ್ಯವಹಾರದ ಕುರಿತು

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು:–**

೯೨೯ (೧೦೭೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೀದರ್ ಜಿಲ್ಲೆಯ ಬ್ರೀಮ್ಸ್‌ನಲ್ಲಿ ಎರವಲು ಸೇವೆ ಮೇಲೆ ಬಂದು ಅವ್ಯವಹಾರ ನಡೆಸಿದವರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಎರವಲು ಸೇವೆ ಮೇಲೆ ಬಂದ ಗುಮಾಸ್ತರು ಅದೇ ಸ್ಥಳದಲ್ಲಿ ಮುಂದುವರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿಯವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## UGC ಮಾರ್ಗ ಸೂಚಿಯಂತೆ AGP-೯೦೦೦ ಹುದ್ದೆ ಪದೋನ್ನತಿ ಹಾಗೂ FDP ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೩೦ (೧೨೦೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿನಾಂಕ:೧೧-೦೭-೨೦೧೬ರ ಯು.ಜಿ.ಸಿ. ಮಾರ್ಗಸೂಚಿಯಂತೆ ಯು.ಜಿ.ಸಿ. ಪ್ರಾಯೋಜಕತ್ವದಲ್ಲಿ ಮತ್ತು ಕಾಲೇಜು ಶಿಕ್ಷಣ ವತಿಯಿಂದ ಗೊತ್ತುಪಡಿಸಿರುವ ಅನುಮೋದಿತ ಶಿಬಿರ/ಕಾರ್ಯಾಗಾರ/ತರಬೇತಿಗಳು ಮತ್ತು ತರಬೇತಿ ಸಂಸ್ಥೆಗಳ ವಿವರಗಳನ್ನು ಒದಗಿಸುವುದು ;

(ಆ) AICTE ಪ್ರಾಯೋಜಿತ Engineering ಶಿಕ್ಷಣ ಸಂಸ್ಥೆಗಳಲ್ಲಿ ಕೈಗೊಳ್ಳುವ ೭ ಅಥವಾ ಹೆಚ್ಚಿನ ದಿನಗಳು ನಡೆಸಲ್ಪಡುವ FDP ತರಬೇತಿಗಳು ದಿನಾಂಕ: ೧೧-೦೭-೨೦೧೬ ಯು.ಜಿ.ಸಿ. ಮಾರ್ಗಸೂಚಿಯನ್ವಯ ತರಬೇತಿಯನ್ನು ನೀಡಲು ಅರ್ಹತೆ ಪಡೆದಿರುವ/ಪಡೆಯದಿರುವ ಆದೇಶಗಳನ್ನು ಒದಗಿಸುವುದು ;

(ಇ) ಎಜಿಪಿ-೯೦೦೦ ವೃತ್ತಿ ಪದೋನ್ನತ್ತಿ ನೀಡಲು ದಿನಾಂಕ: ೧೦-೧೦-೨೦೧೮ರಂದು ನಡೆದ ಪರಿಶೀಲನಾ ಸಮಿತಿಯ ಮುಂದೆ ಹಾಜರಾಗಿದ್ದ ಸಹಾಯಕ ಪ್ರಾಧ್ಯಾಪಕರುಗಳಲ್ಲಿ ತಿರಸ್ಕೃತ ಗೊಂಡಿರುವವರ ಬಗ್ಗೆ ಮಾಹಿತಿಯನ್ನು ಒದಗಿಸುವುದು ;

(ಈ) ಸದರಿ ತಿರಸ್ಕೃತಗೊಂಡ ಸಹಾಯಕ ಪ್ರಾಧ್ಯಾಪಕರುಗಳು ಹಾಜರುಪಡಿಸಿದ್ದ FDP ತರಬೇತಿ ಪ್ರಮಾಣ ಪತ್ರಗಳು, ಮುತ್ತಿತರೆ

ಕೋರ್ಸ್ ದಾಖಲೆಗಳನ್ನು ಪರಿಗಣಿಸುವ ಅಥವಾ ಪರಿಗಣಿಸದಿರುವ ಬಗ್ಗೆ ಯು.ಜಿ.ಸಿ.ಯಿಂದ ಪಡೆಯಲಾದ ಸ್ಪಷ್ಟೀಕರಣದ ಬಗ್ಗೆ ವಿವರಗಳನ್ನು ಒದಗಿಸುವುದು ;

(ಉ) ಎಜಿಪಿ–೯೦೦೦ ವೃತ್ತಿ ಪದೋನ್ನತಿ ನೀಡಲು ದಿನಾಂಕ: ೧೦–೧೦–೨೦೧೮ರಂದು ನಡೆದ ಪರಿಶೀಲನಾ ಸಮಿತಿಯ ಮುಂದೆ ಹಾಜರಾಗಿದ್ದ ಸಹಾಯಕ ಪ್ರಾಧ್ಯಾಪಕರುಗಳು ಪ್ರಸ್ತಾವನೆಗಳನ್ನು ಸಲ್ಲಿಸುವ ಮುನ್ನ ಇಂತಹದ್ದೇ ರಿಫ್ರೆಶರ್ ಕೋರ್ಸ್, ಕಿರು ಅವಧಿಯ ಕೋರ್ಸ್‌ಗಳು ಮತ್ತು FDP ತರಬೇತಿಗಳ ಬಗ್ಗೆ ಇಲಾಖೆಯು ನಿರ್ಧಿಷ್ಟವಾಗಿ ಹೊರಡಿಸಿರುವ ಸುತ್ತೋಲೆಗಳನ್ನು ಒದಗಿಸುವುದು ?

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್‌ಪೂರ್ವ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೧ (೧೨೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರತಿ ವರ್ಷವೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್‌ಪೂರ್ವ ಮತ್ತು ಮೆಟ್ರಿಕ್ ನಂತರದ ವೇತನ ನೀಡಲು ನಿಗದಿಪಡಿಸಿರುವ ವಾರ್ಷಿಕ ಗುರಿಯೇನು ; ವಿದ್ಯಾರ್ಥಿಗಳ ಸಂಖ್ಯೆ ಮತ್ತು ಆರ್ಥಿಕ ಗುರಿ ಒಳಗೊಂಡಂತೆ ವಿವಿರ ನೀಡುವುದು ;

(ಆ) ಹಿಂದುಳಿದ ವರ್ಗಗಳ ಮೆಟ್ರಿಕ್‌ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನಿಗದಿಪಡಿಸಿರುವ ಮಾನದಂಡಗಳೇನು ;

(ಇ) ಹಿಂದುಳಿದ ವರ್ಗಗಳ ಮೆಟ್ರಿಕ್‌ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿವೇತನ ಆರ್ಥಿಕ ಬಿಕ್ಕಟ್ಟಿನಿಂದ ತಡೆಹಿಡಿಯಲಾಗಿದೆಯೇ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಸರ್ಕಾರದ ಡಯಾಲಿಸಿಸ್ ಸೆಂಟರ್‌ಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೩೨ (೧೨೦೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿನ ಅಂತ್ಯದವರೆಗೆ ರಾಜ್ಯದಲ್ಲಿ ಸರ್ಕಾರಿ ಜನರಲ್ ಆಸ್ಪತ್ರೆಗಳಲ್ಲಿ ಪ್ರಾರಂಭಿಸಲಾಗಿರುವ ಡಯಾಲಿಸಿಸ್ ಕೇಂದ್ರಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೯-೨೦ನೇ ಸಾಲಿನ ಅಂತ್ಯದವರೆಗೆ ಮಂಡ್ಯ ಜಿಲ್ಲೆಯ ಜನರಲ್ ಆಸ್ಪತ್ರೆಗಳಲ್ಲಿ ಎಷ್ಟು ಜನ ಡಯಾಲಿಸಿಸ್ ಚಿಕಿತ್ಸೆ ಪಡೆದಿರುತ್ತಾರೆ ; (ತಾಲ್ಲೂಕುವಾರು ಮತ್ತು ಆಸ್ಪತ್ರೆಗಳವಾರು ಮಾಹಿತಿ ನೀಡುವುದು)

(ಇ) ಸರ್ಕಾರದ ಡಯಾಲಿಸಿಸ್ ಸೆಂಟರ್‌ಗಳನ್ನು ನಿರ್ವಹಿಸುತ್ತಿರುವ ಸರ್ಕಾರಿ/ಸರ್ಕಾರೇತರ ಸಂಸ್ಥೆಗಳು ಯಾವುವು ; ಸರ್ಕಾರೇತರ ಸಂಸ್ಥೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದಗಳ ಮುಖ್ಯಾಂಶಗಳೇನು ;

(ಈ) ಹಲವಾರು ಡಯಾಲಿಸಿಸ್ ಕೇಂದ್ರಗಳಲ್ಲಿ ಟೆಕ್ನೀಶಿಯನ್‌ಗಳ ಕೊರತೆ ಮತ್ತು ಡಯಾಲಿಸಿಸ್ ಮೆಷಿನ್‌ಗಳು ಪದೇ ಪದೇ ಕೆಟ್ಟು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಹಾಗಿದ್ದಲ್ಲಿ, ಈ ಪರಿಸ್ಥಿತಿಯನ್ನು ಸುಧಾರಿಸಲು ಕೈಗೊಂಡಿರುವ ಕ್ರಮಗಳೇನು ?

## ೨೦೦೮ರ ನಂತರ ನೇಮಕಗೊಂಡ ಶಿಕ್ಷಕರ/ಉಪನ್ಯಾಸಕರ ಎಕ್ಸ್‌ಗ್ರೇಷಿಯಾ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೯೩೩ (೧೧೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ಹಿಂದೆ ಶಿಕ್ಷಕರ ವೇತನ ತಾರತಮ್ಯ ಸರಿಪಡಿಸಲು (ಪ್ರೌಢ ಶಾಲಾ ಹಾಗೂ ಪದವಿ ಪೂರ್ವ, ಶಿಕ್ಷಕರು, ಮುಖ್ಯ ಗುರುಗಳು, ಪ್ರಾಚಾರ್ಯರು ಉಪನ್ಯಾಸಕರು) ಎಕ್ಸ್‌ಗ್ರೇಷಿಯಾ ನೀಡಲಾಗಿತ್ತೇ ; ಆ ಎಕ್ಸ್‌ಗ್ರೇಷಿಯಾವನ್ನು ಒಂದು ಇನ್‌ಕ್ರಿಮೆಂಟ್ ಆಗಿ ಪರಿವರ್ತಿಸಿ ಮೂಲ ವೇತನದಲ್ಲಿ ಸೇರಿಸಲು ೬ನೇ ವೇತನ ಆಯೋಗ ಶಿಫಾರಸ್ಸು ಮಾಡಿದೆಯೇ ;

(ಆ) ಈ ಎಕ್ಸ್‌ಗ್ರೇಷಿಯಾ ಎಲ್ಲಾ ಪ್ರೌಢ ಶಾಲಾ ಶಿಕ್ಷಕರು, ಮುಖ್ಯ ಗುರುಗಳು ಪದವಿ ಪೂರ್ವ ಉಪನ್ಯಾಸಕರು ಪ್ರಾಚಾರ್ಯರು ಇವರುಗಳಿಗೆ ನೀಡಲಾಗಿತ್ತೇ ; ನೀಡಿರದಿದ್ದರೆ, ಯಾರಿಗೆ ಯಾವ ಯಾವ ಕಾರಣಕ್ಕಾಗಿ ನೀಡಲಾಗಿಲ್ಲ ; (ಸಂಪೂರ್ಣ ವಿವರ ನೀಡುವುದು) ನೀಡಿದ್ದಲ್ಲಿ, ಈ ಹೆಚ್ಚುವರಿ ವೇತನ ಬಡ್ತಿಯನ್ನು ಮರು ಪಾವತಿಸಿಕೊಳ್ಳಲು ಆದೇಶ ಹೊರಡಿಸಲಾಗಿದೆಯೇ ; ಹೊರಡಿಸಿದ್ದರೆ, ಯಾವ ಕಾರಣಕ್ಕೆ ಹೊರಡಿಸಲಾಗಿದೆ ;

(ಇ) ದಿನಾಂಕ:೦೧–೦೮–೨೦೦೮ರ ನಂತರ ನೇಮಕವಾದ ಪ್ರೌಢ ಶಾಲಾ ಶಿಕ್ಷಕರು, ಮುಖ್ಯಗುರುಗಳು, ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರುಗಳು ಎಕ್ಸ್‌ಗ್ರೇಷಿಯಾ ಇನ್‌ಕ್ರಿಮೆಂಟ್ ಆಗಿ ಮೂಲ

ವೇತನದಲ್ಲಿ ಸೇರಿಸುವಲ್ಲಿ, ಅನ್ಯಾಯಕ್ಕೆ ಒಳಗಾಗಿದ್ದಾರೆ ಎಂಬುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನಿಯಮಗಳನ್ನು ರೂಪಿಸಿರುವ ಸರ್ಕಾರವೇ ನಿಯಮಗಳ ನೆಪವೊಡ್ಡಿ ಇವರಿಗೆ ಅನ್ಯಾಯ ಮಾಡುವುದು ಸರಿಯೇ ; ಯಾವ ಕಾಲಮಿತಿಯೊಳಗೆ ಇವರಿಗೂ ಈ ಸೌಲಭ್ಯ ಒದಗಿಸಲಾಗುವುದು ; ಹಾಗೂ ಮರು ಪಾವತಿಸಿಕೊಳ್ಳುವ ಆದೇಶವನ್ನು ವಾಪಸ್ಸು ಪಡೆಯಲಾಗುವುದೇ ? (ಸಂಪೂರ್ಣ ವಿವರ ನೀಡುವುದು)

## ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೯೩೪ (೧೧೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಯಾವ ವರ್ಷದವರೆಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ; (ಪ್ರತಿಯೊಂದರ ಆದೇಶದ ಪ್ರತಿ ನೀಡುವುದು)

(ಆ) ಯಾವ ವರ್ಷದವರೆಗೆ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ಒದಗಿಸಿ ಆದೇಶ ಹೊರಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ವಿಧಿಸಿರುವ ಷರತ್ತುಗಳು ಹಾಗೂ ಅದಕ್ಕಿರುವ ನಿಯಮಾವಳಿಗಳೇನು ;

(ಈ) ಈ ನಿಯಮಾವಳಿಗಳ ಕಾರಣಕ್ಕಾಗಿ ಹುದ್ದೆ ಖಾಲಿ ಇದ್ದರೂ ಕೂಡ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗುತ್ತಿಲ್ಲ ;

ಇದ್ದಲ್ಲಿ, ಅಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಉ) ಈ ನಿಯಮಾವಳಿಗಳ ಸಡಿಲಿಕೆಗೆ ಸರ್ಕಾರ ತೆಗೆದುಕೊಳ್ಳುವ ಕ್ರಮವೇನು ?

## ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೯೩೫ (೧೧೭೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; (ಅವರಿಗೆ ನೀಡಲಾಗುತ್ತಿರುವ ಸೇವಾ ಸೌಲಭ್ಯಗಳ ವಿವರಗಳನ್ನು ಸಂಪೂರ್ಣ ವಿವರದೊಂದಿಗೆ ನೀಡುವುದು)

(ಆ) ಅತಿಥಿ ಉಪನ್ಯಾಸಕರಿಗೆ ನಿಯಮಿತವಾಗಿ ತಿಂಗಳಿಗೆ ಸರಿಯಾಗಿ ವೇತನ ಬಿಡುಗಡೆಯಾಗದೇ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವೇತನವನ್ನು ಸರಿಯಾದ ಸಮಯಕ್ಕೆ ಬಿಡುಗಡೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ವಿಚಾರವಾಗಿ ಸರ್ಕಾರದ ಸ್ಪಷ್ಟ ನಿಲುವೇನು ; ತೆಗೆದುಕೊಂಡ ಕ್ರಮಗಳೇನು ? (ವಿವರ ಒದಗಿಸುವುದು)

# ವಿಶ್ವವಿದ್ಯಾಲಯಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೯೩೬ (೧೧೭೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಇರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; ಮತ್ತು ಯಾವುವು ; ಪ್ರಸ್ತುತ ಪೂರ್ಣ ಪ್ರಭಾರದೊಂದಿಗೆ ಕಾರ್ಯ ನಿರ್ವಹಿಸುತ್ತಿರುವ ಕುಲಪತಿಗಳ ವಿವರ ಹಾಗೂ ಪ್ರಭಾರದೊಂದಿಗೆ ಕಾರ್ಯ ನಿರ್ವಹಿಸುತ್ತಿರುವ ಕುಲಪತಿಗಳ, ವಿಶ್ವ ವಿದ್ಯಾಲಯಗಳ ವಿವರಗಳನ್ನು ಒದಗಿಸುವುದು ;

(ಆ) ಖಾಲಿ ಇರುವ ಕುಲಪತಿಗಳ ವಿಶ್ವವಿದ್ಯಾಲಯಗಳು ಯಾವುವು ; (ವಿವರವನ್ನು ಒದಗಿಸುವುದು) ಕುಲಪತಿಗಳ ನೇಮಕ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಇ) ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರರ ಹುದ್ದೆಗಳು ಯಾವುವು ಮತ್ತು ಎಷ್ಟು ; (ಪದನಾಮ ಸಹಿತ ವಿವರವನ್ನು ನೀಡುವುದು) ಮಂಜೂರಾದ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವುವು ; (ವಿಶ್ವವಿದ್ಯಾಲಯಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಎಲ್ಲಾ ವಿಶ್ವವಿದ್ಯಾಲಯಗಳು ಕ್ರಮ ವಹಿಸಿವೆಯೇ ; ಕ್ರಮ ವಹಿಸಿದ್ದಲ್ಲಿ

ನೇಮಕಾತಿ ಪ್ರಕ್ರಿಯೆ ಯಾವಾಗ ನಡೆಯುವುದು ; ಹಾಗೂ ನೇಮಕಾತಿ ಮಾಡಿಕೊಳ್ಳಲು ಇರುವ ನಿಯಮಾವಳಿಗಳೇನು ; ಎಲ್ಲಾ ವಿಶ್ವವಿದ್ಯಾಲಯಗಳಿಗೂ ಒಂದೇ ನಿಯಮ ಅನ್ವಯಿಸುವುದೇ ? (ನಿಯಮಾವಳಿಗಳ ವಿವರ ನೀಡುವುದು)

## ಸಾಮಾನ್ಯ ಆಡಳಿತ ಮಂಡಳಿಗಳ ಪದವಿ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೯೩೭ (೧೧೮೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಾಮಾನ್ಯ ಆಡಳಿತ ಮಂಡಳಿಗಳು ನಡೆಸುತ್ತಿರುವ ಖಾಸಗಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳನ್ನು ಪ್ರಾರಂಭಿಸಿದ ವರ್ಷ ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಖಾಸಗಿ ಆಡಳಿತ ಮಂಡಳಿಗಳು ನಡೆಸುತ್ತಿರುವ ಪದವಿ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಇರುವ ನಿಯಮಾವಳಿಗಳೇನು ; ಯಾವ ವರ್ಷದವರೆಗೆ ಅನುದಾನಕ್ಕೆ ಒಳಪಡಿಸಲಾಗಿದೆ ; (ವಿವರ ನೀಡುವುದು)

(ಇ) ೧೯೮೭ ರಿಂದ ೧೯೯೫ರ ಮಧ್ಯದಲ್ಲಿ ಸಾಮಾನ್ಯ ಆಡಳಿತ ಮಂಡಳಿಗಳು ಆರಂಭಿಸಿದ ಪದವಿ ಕಾಲೇಜುಗಳನ್ನು ಅನುದಾನಕ್ಕೆ

ಒಳಪಡಿಸುವ ಕುರಿತು ಸರ್ಕಾರದ ಕ್ರಮ ಹಾಗೂ ನಿಲುವೇನು ; ಇದಕ್ಕಾಗಿ ಸರ್ಕಾರಕ್ಕೆ ತಗಲುಬಹುದಾದ ವೆಚ್ಚ ಎಷ್ಟು ; ಈ ಬಾರಿಯ ಬಜೆಟ್‌ನಲ್ಲಿ ಅನುದಾನವನ್ನು ಒದಗಿಸಲು ಸರ್ಕಾರ ಮುಂದಾಗುವುದೇ ?

## ಸರ್ಕಾರದ ಇಂಜೀನಿಯರಿಂಗ್ ಕಾಲೇಜಿನ ಅಧ್ಯಾಪಕರುಗಳಿಗೆ ಎ.ಐ.ಸಿ.ಟಿ.ಇ ೭ನೇ ವೇತನ ಆಯೋಗದ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೯೩೮ (೧೨೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಅಧ್ಯಾಪಕರುಗಳಿಗೆ ಎ.ಐ.ಸಿ.ಟಿ.ಇ ೭ನೇ ವೇತನ ಆಯೋಗದ ವರದಿಯನ್ನು ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ವರದಿಯನ್ನು ದಿನಾಂಕ: ೩೧–೦೩–೨೦೨೦ರೊಳಗೆ ಅನುಷ್ಠಾನಗೊಳಿಸದಿದ್ದರೆ ಕೇಂದ್ರದಿಂದ ಶೇಕಡಾ ೫೦ ರಷ್ಟು ಅನುದಾನವನ್ನು ನೀಡಲಾಗುವುದಿಲ್ಲವಾದ್ದರಿಂದ ಪೂರ್ತಿ ಹೊರೆ ರಾಜ್ಯ ಸರ್ಕಾರದ ಮೇಲೆ ಬೀಳುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಯುಜಿಸಿ ೭ನೇ ವೇತನವನ್ನು ಈಗಾಗಲೇ ಪದವಿ ಕಾಲೇಜುಗಳಿಗೆ ಸರ್ಕಾರ ನೀಡಿದ್ದು, ಇಂಜಿನಿಯರಿಂಗ್ ಕಾಲೇಜುಗಳಿಗೆ ನೀಡದಿರುವ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ; (ವಿವರವಾದ ಮಾಹಿತಿಯನ್ನು ನೀಡುವುದು)

(ಈ) ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಅಧ್ಯಾಪಕರುಗಳಿಗೆ ೨೦೧೧ ಮಾರ್ಚ್ ಮಾಹೆಯಲ್ಲಿ ಎ.ಐ.ಸಿ.ಟಿ.ಇ ೬ನೇ ವೇತನ ಅನುಷ್ಠಾನಗೊಳಿಸಿದ್ದು ಶೇಕಡಾ ೩೩ ರಷ್ಟು ಹಿಂಬಾಕಿಯನ್ನು ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಕಾಲಮಿತಿಯಲ್ಲಿ ಬಿಡುಗಡೆ ಮಾಡಲಾಗುತ್ತದೆ ? (ವಿವರವಾದ ಮಾಹಿತಿ ನೀಡುವುದು)

## ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ, ಹುಬ್ಬಳ್ಳಿ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೯೩೯ (೧೨೨೨) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ವೈದ್ಯಕೀಯ ವಿಜ್ಞಾನ ಸಂಸ್ಥೆಗಳಿವೆ ; ಕಳೆದ ಮೂರು ವರ್ಷಗಳಲ್ಲಿ ಒಳ ಮತ್ತು ಹೊರ ರೋಗಿಗಳ ಸಂಖ್ಯೆ ಎಷ್ಟು ;

(ಆ) ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆಯು ಪ್ರಸ್ತುತ ಎಷ್ಟು ಹಾಸಿಗೆ ಸೌಲಭ್ಯವನ್ನು ಹೊಂದಿದೆ ; (ಚಿಕಿತ್ಸೆ ಪಡೆಯಲು ಬರುವ ರೋಗಿಗಳು ಯಾವ ಯಾವ ಜಿಲ್ಲೆಗೆ ಸಂಬಂಧಿಸಿದವರು ಎಂಬ ಸಂಖ್ಯಾ ಮಾಹಿತಿ ನೀಡುವುದು)

(ಇ) ಹುಬ್ಬಳ್ಳಿಯ ಕೆ.ಎಂ.ಸಿ.ಗೆ ಒಳ ಮತ್ತು ಹೊರರೋಗಿಗಳ ಸಂಖ್ಯೆ ಹೆಚ್ಚಿಗೆ ಇದ್ದು, ರೋಗಿಗಳು ಬೆಡ್‌ಗಳಿಲ್ಲದೇ ಐ.ಸಿ.ಯು ಇಲ್ಲದೇ ಪರದಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಯಾವ ಸೌಕರ್ಯಗಳು ಮತ್ತು ಎಷ್ಟು ಬೆಡ್‌ಗಳಿಗೆ ವಿಸ್ತರಿಸುವ ಬಗ್ಗೆ ಕ್ರಮ ವಹಿಸುವುದು ;

(ಈ) ರಾಜ್ಯದ ಇತರೆ ವೈದ್ಯಕೀಯ ವಿಜ್ಞಾನ ಸಂಸ್ಥೆಗಳಲ್ಲಿ ಒಳ ಮತ್ತು ಹೊರ ರೋಗಿಗಳ ಸಂಖ್ಯೆ ಕಡಿಮೆ ಇದ್ದರೂ ಹೆಚ್ಚಿನ ಅನುದಾನ ನೀಡಿ, ಹೆಚ್ಚಿನ ರೋಗಿಗಳಿರುವ ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಕಡಿಮೆ ಅನುದಾನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ?

## ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ನೌಕರರ ವೇತನದ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೯೪೦ (೧೨೨೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿಶ್ವವಿದ್ಯಾಲಯಗಳು ಯಾವುವು ; ಇವುಗಳನ್ನು ಯಾವಾಗ ಸ್ಥಾಪನೆ ಮಾಡಲಾಗಿದೆ ; ಹಾಲಿ ಕಾರ್ಯನಿರ್ವಹಿಸುತ್ತಿರುವ ಕುಲಪತಿಗಳು, ಕುಲಸಚಿವರ ಹೆಸರು ಸಮೇತ ವಿವರವಾದ ಮಾಹಿತಿ ನೀಡುವುದು ;

(ಆ) ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯವನ್ನು ಯಾವಾಗ ಸ್ಥಾಪನೆ ಮಾಡಲಾಗಿದೆ ; ಇದರ ಉದ್ದೇಶಗಳೇನು ; ಇದರ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ ಸಂಖ್ಯೆ ಎಷ್ಟು ; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ಗುತ್ತಿಗೆ/ಸಂಚಿತ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ, ಬೋಧಕೇತರ ಸಿಬ್ಬಂದಿಗಳು ಎಷ್ಟು ; (ಕ್ರಮವಾಗಿ ಹೆಸರು, ಹುದ್ದೆಯ ಪದನಾಮ, ವಿಳಾಸ ಹಾಗೂ ಸೇವೆಗೆ ಸೇರಿದ ದಿನಾಂಕದೊಂದಿಗೆ ಮಾಹಿತಿ ನೀಡುವುದು)

(ಈ) ಸದರಿ ವಿಶ್ವವಿದ್ಯಾಲಯದಲ್ಲಿ ಗುತ್ತಿಗೆ/ಸಂಚಿತ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ, ಬೋಧಕೇತರ ಸಿಬ್ಬಂದಿಗಳಿಗೆ ಕಳೆದ ೮ ತಿಂಗಳುಗಳಿಂದ ವೇತನ ನೀಡದಿರಲು ಕಾರಣಗಳೇನು ;

(ಉ) ಯಾವ ಕಾಲಮಿತಿಯೊಳಗೆ ಇವರಿಗೆ ವೇತನ ಪಾವತಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ?

## ಕಾಲೇಜುಗಳ ಸಿಬ್ಬಂದಿವರ್ಗ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೯೪೧ (೧೦೭೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಕಾಲೇಜುಗಳಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ಕರಾರು ಆಧಾರದ ಮೇಲೆ ನೇಮಕಾತಿ ಹೊಂದಿ, ನಂತರ ಖಾಯಂಮಾತಿಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಪ್ರಭಾರ ಪ್ರಾಂಶುಪಾಲರ ಸಂಖ್ಯೆ ಎಷ್ಟು ಮತ್ತು ಅನ್ಯ ಕಾರ್ಯನಿಮಿತ್ತ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರ ಸಂಖ್ಯೆ ಎಷ್ಟು ;

(ಆ) ಸದರಿ ಪ್ರಾಂಶುಪಾಲರುಗಳಿಗೆ ಯಾವ ಮಾನದಂಡದ ಆಧಾರದ ಮೇಲೆ ಪದೋನ್ನತಿ ನೀಡಲಾಗುತ್ತಿದೆ ; ಈ ಪದೋನ್ನತಿಯು ನ್ಯಾಯಯುತವಾಗಿ ನಡೆದಿದೆಯೇ ;

(ಇ) ಕರಾರು ಆಧಾರದ ಮೇಲೆ ನೇಮಕಾತಿ ಹೊಂದಿ ಖಾಯಂಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರುಗಳಿಗೆ ಪದೋನ್ನತಿ ವಿಚಾರದಲ್ಲಿ ಸೂಕ್ತ ನ್ಯಾಯ ದೊರಕದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸೇವಾ ಹಿರಿತನ ಮತ್ತು ಕಿರಿತನವು ಪದೋನ್ನತಿ ವಿಚಾರದಲ್ಲಿ ಅನ್ವಯವಾಗುತ್ತಿದೆಯೇ ; ಸೇವಾ ಹಿರಿತನ ಹೊಂದಿರುವವರಿಗೆ ಪದೋನ್ನತಿಯು ನ್ಯಾಯಬದ್ಧವಾಗಿ ಮತ್ತು ಕರಡು ನಿಯಮದಂತೆ ದೊರಕದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸುಮಾರು ೧೮ ರಾಜ್ಯಗಳಲ್ಲಿ ಸೇವಾ ಜ್ಯೇಷ್ಠತೆಯ ಆಧಾರದ ಮೇಲೆಯೇ ಪ್ರಾಂಶುಪಾಲರುಗಳನ್ನು ನೇಮಕ ಮಾಡಲಾಗಿದ್ದು, ರಾಜ್ಯದಲ್ಲಿಯೂ ಸಹ ಯು.ಜಿ.ಸಿ. ವೇತನ ಶ್ರೇಣಿಯನ್ನು ಅನುಷ್ಠಾನಗೊಳಿಸಿದ ಪೂರ್ವದಲ್ಲಿ ನೇಮಕಗೊಂಡವರನ್ನು ಸೇವಾ ಜ್ಯೇಷ್ಠತೆಯ ಮೇಲೆ ಪ್ರಾಂಶುಪಾಲರನ್ನಾಗಿ ನೇಮಕ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಇದಕ್ಕೆ ಕಾಲಮಿತಿ ಎಷ್ಟು ?

## ಉಚಿತ ಸೈಕಲ್ ವಿತರಣೆ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೯೪೨ (೧೦೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೫ ವರ್ಷಗಳಲ್ಲಿ ರಾಜ್ಯ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ನೀಡುವ ಸೈಕಲ್ ಖರೀದಿಸಿದ ಒಟ್ಟು ಮೊತ್ತ ಎಷ್ಟು;

(ಆ) ಯಾವ ಯಾವ ಸಂಸ್ಥೆಗಳಿಂದ ಖರೀದಿ ಮಾಡಲಾಗಿದೆ ; (ವರ್ಷವಾರು ವಿವರ ನೀಡುವುದು) ಕರೆಯಲಾದ ಟೆಂಡರ್‌ಗಳ ಮಾಹಿತಿ ನೀಡುವುದು ;

(ಇ) ಪಾವತಿಸಿದ ಒಟ್ಟು ಮೊತ್ತ ಎಷ್ಟು ಹಾಗೂ ಬಾಕಿ ಇರುವ ಬಿಲ್ಲುಗಳ ವಿವರಗಳನ್ನು ನೀಡುವುದು; ಬಾಕಿ ಇರುವ ಬಿಲ್ಲುಗಳನ್ನು ಯಾವ ಕಾಲಮಿತಿಯೊಳಗೆ ನೀಡಲಾಗುವುದು ? (ವಿವರ ನೀಡುವುದು)

## ಅರಣ್ಯ ಪ್ರದೇಶದ ಟೋಲ್‌ಗೇಟ್ ಬಗ್ಗೆ

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ):–**

೯೪೩ (೧೦೭೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೈಮರ ಟೋಲ್‌ಗೇಟ್ ಸರ್ಕಾರದಿಂದ ಗುರುತು ಮಾಡಿರುವ ತಪಾಸಣೆ ಕೇಂದ್ರವೇ;

(ಆ) ಪ್ರವಾಸ ವಾಹನಗಳಿಗೆ ಗೇಟ್ ಬಳಿ ಶುಲ್ಕ ವಿಧಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಲ್ಲವಾದಲ್ಲಿ, ಶುಲ್ಕ ವಿಧಿಸಲು ಅನುಮತಿ ಕೊಟ್ಟವರು ಯಾರು; ಮಾನದಂಡ ಏನು; ರಶೀದಿಗೆ ಸಹಿ ಮಾಡುವವರು ಯಾರು;

(ಈ) ೩ ವರ್ಷಗಳಲ್ಲಿ ವಸೂಲಾದ ಶುಲ್ಕ ಎಷ್ಟು ? (ವಿವರ ನೀಡುವುದು)

## ಶಿಕ್ಷಕರುಗಳ ವಿಶೇಷ ಭತ್ಯೆಗಳು

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೯೪೪ (೧೦೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿನಾಂಕ : ೦೧.೦೮.೨೦೦೮ರ ನಂತರ ನೇಮಕಗೊಂಡಿರುವ ಪ್ರೌಢಶಾಲಾ ಸಹ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ವಿಶೇಷ ಭತ್ಯೆಯನ್ನು ಮೂಲ ವೇತನದಲ್ಲಿ ವಿಲೀನಗೊಳಿಸಲಾಗಿದೆಯೇ;

(ಆ) ಈ ವಿಷಯವಾಗಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರಕ್ಕೆ ತಿಳಿದಿದ್ದಲ್ಲಿ, ಇದನ್ನು ಜಾರಿ ಮಾಡಲು ವಿಳಂಬ ನೀತಿ ಅನುಸರಿಸುತ್ತಿರುವುದು ಏಕೆ;

(ಈ) ಪದವಿ ಪೂರ್ವ ಕಾಲೇಜುಗಳಲ್ಲಿ ಪಿ.ಹೆಚ್.ಡಿ, ಎಸ್.ಎಲ್.ಇ.ಟಿ, ಎನ್.ಇ.ಟಿ. ಪದವಿ ಹೊಂದಿರುವ ಉಪನ್ಯಾಸಕರಿಗೆ ಸರ್ಕಾರ ನೇಮಿಸಿದ ಕುಮಾರ್ ನಾಯ್ಕ್ ಸಮಿತಿ ಶಿಫಾರಸ್ಸಿನ ಪ್ರಕಾರ ಪದವಿ ಕಾಲೇಜಿಗೆ ಬಡ್ತಿ ನೀಡಲಾಗಿದೆಯೇ; ಈ ವಿಷಯವಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಆರ್.ಎಂ.ಎಸ್. ಶಾಲೆಗಳನ್ನು ಅಭಿವೃದ್ಧಿಪಡಿಸುವುದು

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೯೪೫ (೧೦೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಮಾಧ್ಯಮ ಶಿಕ್ಷಣ ಶಾಲೆಗಳಿಗೆ ಕೇಂದ್ರದಿಂದ ಅನುದಾನ ಒದಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ೫ ವರ್ಷಗಳಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ; ಬಂದ ಅನುದಾನವನ್ನು ಯಾವ ಕಾರ್ಯಕ್ರಮಕ್ಕೆ ಉಪಯೋಗಿಸಲಾಗಿದೆ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಪೂರ್ಣಗೊಂಡಿರುವ ಕಾಮಗಾರಿ ಹಾಗೂ ತಗುಲಿದ ವೆಚ್ಚವೆಷ್ಟು; (ವಿವರ ಒದಗಿಸುವುದು)

(ಈ) ಅಪೂರ್ಣಗೊಂಡ ಕಾಮಗಾರಿ ಹಾಗೂ ವಿಳಂಬಕ್ಕೆ ಕಾರಣಗಳು ಏನು; (ವಿವರ ಒದಗಿಸುವುದು) ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ರಾಯಚೂರು ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೬ (೧೨೧೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೯–೨೦ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಬಿಡುಗಡೆಯಾದ ಅನುದಾನ ಎಷ್ಟು; ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಬಳಕೆ ಮಾಡಲಾಗಿದೆಯೇ; ಯಾವ ಯಾವ ಯೋಜನೆಗಳಿಗೆ ಬಳಕೆ ಮಾಡಲಾಗಿದೆ ?

## ರಾಯಚೂರು ಜಿಲ್ಲೆಯಲ್ಲಿರುವ ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೪೭ (೧೨೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಮಂಜೂರಾಗಿರುವ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯಲ್ಲಿರುವ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಚಾರ್ಯರ ಸಂಖ್ಯೆ ಎಷ್ಟು; ಖಾಲಿ ಇರುವ ಪ್ರಾಚಾರ್ಯರ ಹುದ್ದೆಗಳು ಎಷ್ಟು;

(ಇ) ರಾಯಚೂರು ನಗರದಲ್ಲಿರುವ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಛೇರಿ ಕಟ್ಟಡ ಶಿಥಿಲ ವ್ಯವಸ್ಥೆಯಲ್ಲಿದ್ದು, ನೂತನ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ನಗರದಲ್ಲಿ KGTTI ತರಬೇತಿ ಕೇಂದ್ರ ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೮ (೧೨೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ೧೯೫೮ನೇ ಸಾಲಿನಲ್ಲಿ ಪ್ರಾರಂಭ ಮಾಡಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ನಗರದಲ್ಲಿ ಕೆ.ಜಿ.ಟಿ.ಟಿ.ಐ (KGTTI) ತರಬೇತಿ ಕೇಂದ್ರ ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರದಿಂದ ಇಲ್ಲಿಯವರೆಗೆ ರಾಯಚೂರು ಜಿಲ್ಲೆಯಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು?

## ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೯ (೧೨೧೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ಮಾನ್ವಿಯಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ನಗರದಲ್ಲಿರುವ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜನ್ನು ಯಾವ ಶೈಕ್ಷಣಿಕ ವರ್ಷದಲ್ಲಿ ಪ್ರಾರಂಭಿಸಲಾಗಿದೆ; ತರಗತಿ ಕೊಠಡಿಗಳ ನಿರ್ಮಾಣ ಯಾವ ಹಂತದಲ್ಲಿದೆ; ಬಿಡುಗಡೆಯಾಗಿರುವ ಅನುದಾನ ಎಷ್ಟು?

## ರಾಯಚೂರಿನಲ್ಲಿರುವ ರಿಮ್ಸ್ ಆಸ್ಪತ್ರೆಯ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೦ (೧೨೧೫) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿರುವ ರೀಮ್ಸ್ ಕಾಲೇಜಿಗೆ ಮಂಜೂರಾದ ಒಟ್ಟು ಪ್ರವೇಶಾವಕಾಶಗಳು ಎಷ್ಟು ; ಇದಕ್ಕೆ ಅನುಗುಣವಾಗಿ ಆಸ್ಪತ್ರೆಗೆ ಬೇಕಾಗಿರುವ ಹಾಸಿಗೆಗಳು ಎಷ್ಟು ; ಪ್ರಸ್ತುತ ಇರುವ ಹಾಸಿಗೆಗಳು ಎಷ್ಟು;

(ಆ) ರಾಯಚೂರು ರೀಮ್ಸ್ ಮೆಡಿಕಲ್ ಕಾಲೇಜಿನಲ್ಲಿರುವ ಒಟ್ಟು ಪ್ರಾಧ್ಯಾಪಕರ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು; ಭರ್ತಿ ಮಾಡಿರುವ ಹುದ್ದೆಗಳು ಎಷ್ಟು;

(ಇ) ರಾಯಚೂರು ರೀಮ್ಸ್ ಆಸ್ಪತ್ರೆಯಲ್ಲಿ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಕಾಮಗಾರಿ ಮಾಡದೇ ಅನುದಾನ ದುರ್ಬಳಕೆ ಆಗಿರುವುದರ ಬಗ್ಗೆ ಸೂಕ್ತ ತನಿಖೆ ಮಾಡುವ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೧ (೧೦೭೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ವ್ಯಾಪ್ತಿಯಲ್ಲಿ ೨೦೧೫–೧೬ನೇ ಸಾಲಿನಿಂದ ೨೦೧೯–೨೦ನೇ ಸಾಲಿನವರೆಗೆ ಕೆನರಾ ವೃತ್ತದ ಹಳಿಯಾಳ

ವಿಭಾಗಕ್ಕೆ ಬಂದಿರುವ ಅನುದಾನ ಎಷ್ಟು; ಹಾಗೂ ಸದರಿ ಅನುದಾನದಿಂದ ಕೈಗೊಂಡ ಕಾಮಗಾರಿಗಳು ಯಾವುವು; ವಿವರ ಹಾಗೂ ಆಡಿಟ್ ಪ್ರತಿಯೊಂದಿಗೆ ನೀಡುವುದು ; (ಕಾಮಗಾರಿಯ ಅಂದಾಜು ಪ್ರತಿ, ಬಿಲ್ ಪ್ರತಿ, ಎಂ.ಬಿ. ಪ್ರತಿ ಹಾಗೂ ಕಾಮಗಾರಿಯ ಫೋಟೋ ಸಮೇತ ತಾಲ್ಲೂಕುವಾರು / ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿಯಲ್ಲಿ ಬಹಳಷ್ಟು ಅವ್ಯವಹಾರಗಳು ನಡೆದಿರುವುದು ಕಂಡು ಬಂದಿದ್ದು, ಸರ್ಕಾರದಿಂದ ಬಂದಿರುವ ಅನುದಾನ ದುರುಪಯೋಗವಾಗಿದ್ದು, ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿರುವುದರಿಂದ ಸಂಬಂಧಿಸಿದ ಅಧಿಕಾರಿಯ ಮೇಲೆ ಸೂಕ್ತ ತನಿಖೆ ನಡೆಸಿ ಕ್ರಮ ಜರುಗಿಸಲಾಗುವುದೇ; (ವಿವರ ನೀಡುವುದು)

(ಇ) ಕೆಲವೊಂದು ವಲಯದಲ್ಲಿ ಬಂದಿರುವ ಅನುದಾನದಲ್ಲಿ ಅಂದಾಜು ಪತ್ರಿಕೆ ತಯಾರಿಸಿ ಮಂಜೂರು ಮಾಡಿಸಿಕೊಂಡಿದ್ದು, ಕೆಲಸ ಸರಿಯಾಗಿ ನಡೆಯದೆ ಶೂನ್ಯವೆಂದು ಸಾರ್ವಜನಿಕರಿಂದ ತಿಳಿದು ಬಂದಿದ್ದು, ಈ ಬಗ್ಗೆ ಲೋಕಾಯುಕ್ತರಿಂದ ಅಥವಾ ಬೇರೆ ಯಾವುದೇ ಮೂಲದಿಂದ ಸೂಕ್ತ ತನಿಖೆ ಮಾಡಿಸಲಾಗುವುದೇ?

## ಸೇವೆಯಲ್ಲಿ ಅನುದಾನಿತ ಶಿಕ್ಷಕರಿಗೆ ಖಾಯಂ ಮಾಡುವ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೫೨ (೧೦೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಾರವಾರ ಜಿಲ್ಲೆಯ ಹಳಿಯಾಳ ಪಟ್ಟಣದ ಶಿವಾಜಿ ಪ್ರೌಢ ಶಾಲೆಯಲ್ಲಿ ಕಳೆದ ೨೨ ವರ್ಷಗಳಿಂದ ಅರೆಕಾಲಿಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಒಬ್ಬ ಶಿಕ್ಷಕನನ್ನು ಇಲ್ಲಿಯವರೆಗೆ ಖಾಯಂ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ೨೦೦೭ರಲ್ಲಿ ಅರೆಕಾಲಿಕ ಶಿಕ್ಷಕರನ್ನು ಖಾಯಂ ಮಾಡುವ ಸಂದರ್ಭದಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ ೧೬ ಎಸ್.ಎಲ್.ಬಿ ೧೯೯೬, ದಿನಾಂಕ : ೦೯/೦೧/೨೦೧೬ ರನ್ವಯ ೨(I) (IV) ರಲ್ಲಿ ೧೯೯೬–೯೭ನೇ ಸಾಲಿಗೆ ಕನಿಷ್ಠ ಒಂದು ವರ್ಷ ಸೇವೆ ಸಲ್ಲಿಸಿರಬೇಕು ಎಂಬ ನಿಯಮಾವಳಿಯನ್ನು ಪೂರೈಸದ ಕಾರಣ ಸೇವಾ ಸಕ್ರಮಾತಿಯಿಂದ ಸಂಬಂಧಿಸಿದವರ ಹೆಸರನ್ನು ಕೈಬಿಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಮಾನವೀಯತೆ ದೃಷ್ಟಿಯಿಂದ ಇವರು ಮಾಡಿರುವ ಸೇವೆಯನ್ನು ಪರಿಗಣಿಸಿ ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಅಕೇಶಿಯಾ ನೆಡುತೋಪಿನಲ್ಲಿ ಅಕ್ರಮ ಕಡಿತ ಮಾಡಿ ಹಣ ದುರುಪಯೋಗ ಮಾಡಿರುವ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೩ (೧೦೭೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆನರಾ ವೃತ್ತದ ಹಳಿಯಾಳ ವಿಭಾಗದ ವ್ಯಾಪ್ತಿಗೆ ಬರುವ ದಾಂಡೇಲಿ ಅರಣ್ಯ ವಲಯದ ಉಸೋಡಾ ಅರಣ್ಯದಲ್ಲಿ ೨೦೧೭ರಲ್ಲಿ ೩೦

ಹೆಕ್ಟೇರ್ ಪ್ರದೇಶದಲ್ಲಿ ನಡೆದಿರುವ ಅಕೇಶೀಯಾ ನೆಡುತೋಪಿನಲ್ಲಿ ಭಾರೀ ಪ್ರಮಾಣದ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಸಂಬಂಧಿಸಿದವರ ಮೇಲೆ ಯಾವ ಕ್ರಮಕೈಗೊಂಡಿದೆ; (ವಿವರ ನೀಡುವುದು)

(ಆ) ಸದರಿ ಅರಣ್ಯ ಪ್ರದೇಶದಲ್ಲಿ ಈ ಹಿಂದೆ ಬೆಳೆಸಿರುವ ಅಕೇಶಿಯಾ ಮರಗಳನ್ನು ಕಟಾವು ಮಾಡಿ ಅದೇ ಸ್ಥಳದಲ್ಲಿ ಪುನಃ ಅಕೇಶಿಯಾ ಸಸಿಗಳನ್ನು ಬೆಳೆಸಬೇಕೆಂದಿದ್ದರೂ ಸದರಿ ಆದೇಶವನ್ನು ಗಾಳಿಗೆ ತೂರಿ ೩೦ ಹೆಕ್ಟರ್ ಪ್ರದೇಶದಲ್ಲಿ ೫% ರಷ್ಟು ಪ್ರದೇಶದಲ್ಲಿನ ಮರಗಳನ್ನು ಕಡಿದು ಉಳಿದ ೨೫% ಪ್ರದೇಶದ ಕಟಾವು ಕಾರ್ಯ ಬಾಕಿ ಉಳಿಸಿ ಎಲ್ಲಾ ಮರಗಳನ್ನು ಕಡಿಯಲಾಗಿದೆ ಎಂದು ಹೇಳಿ ಗುತ್ತಿಗೆದಾರರಿಗೆ ಸರ್ಕಾರದಿಂದ ಹಣ ಪಾವತಿಸಿ ಅವ್ಯವಹಾರ ಮಾಡಿರುವವರು ಯಾರು ಯಾರು; ಈ ಬಗ್ಗೆ ಲೋಕಾಯುಕ್ತರಿಂದ ಸೂಕ್ತ ತನಿಖೆ ಮಾಡಿಸಲಾಗುವುದೇ? (ಸದರಿ ಅಕೇಶಿಯಾ ನಡುತೋಪಿನ ಸವಿಸ್ತಾರ ವರದಿ ನೀಡುವುದು)

## ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆಯ ಆಧುನೀಕರಣದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೪ (೧೦೪೦) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೇಮಾವತಿ ಸಹಕಾರಿ ಸಕ್ಕರೆ ಕಾರ್ಖಾನೆ ಶ್ರೀನಿವಾಸಪುರ, ಚನ್ನರಾಯಪಟ್ಟಣ ತಾಲ್ಲೂಕು ಇದನ್ನು ಆಧುನೀಕರಿಸಿ ಕಬ್ಬು ಅರೆಯುವ ಸಾಮರ್ಥ್ಯವನ್ನು ಹೆಚ್ಚಿಸಲು ಶ್ರೀ ಚಾಮುಮಡೇಶ್ವರಿ ಶುಗರ್ಸ್ ಲಿಮಿಟೆಡ್, ಬೆಂಗಳೂರು ಇವರೊಂದಿಗೆ ಒಪ್ಪಂದವಾಗಿದ್ದು, ಈ ಒಪ್ಪಂದದಂತೆ ಹೇಮಾವತಿ ಸಹಕಾರಿ ಸಕ್ಕರೆ ಕಾರ್ಖಾನೆಯನ್ನು ಆಧುನೀಕರಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಯಾವ ವರ್ಷದಲ್ಲಿ ಆಧುನೀಕರಿಸಲಾಗಿದೆ ಮತ್ತು ಆಧುನೀಕರಿಸಿರುವ ಕಾಮಗಾರಿಗಳ ವಿವರ ನೀಡುವುದು; ಆಧುನೀಕರಣದ ನಂತರ ಕಬ್ಬು ಅರೆಯುವ ಸಾಮರ್ಥ್ಯ ಎಷ್ಟು ಹೆಚ್ಚಳವಾಗಿದೆ; (ವಿವರ ನೀಡುವುದು)

(ಇ) ಈ ಭಾಗದ ರೈತರು ಪ್ರತಿ ವರ್ಷ ಬೆಳೆಯುತ್ತಿರುವ ಕಬ್ಬಿನ ಅಂದಾಜು ಪ್ರಮಾಣವೆಷ್ಟು; ಈ ಕಾರ್ಖಾನೆಯು ರೈತರಿಂದ ಪ್ರತಿ ವರ್ಷ ಎಷ್ಟು ಟನ್ ಕಬ್ಬನ್ನು ಖರೀದಿ ಮಾಡುತ್ತಿದೆ; ಖರೀದಿಸುವ ಪ್ರತಿ ಟನ್‌ಗೆ ನೀಡುತ್ತಿರುವ ಬೆಲೆ ಎಷ್ಟು; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಈ) ಪ್ರತಿ ಟನ್ ಕಬ್ಬಿಗೆ ಸರ್ಕಾರವು ನಿಗದಿಪಡಿಸಿರುವ ಬೆಲೆ ಎಷ್ಟು; ಸರ್ಕಾರವು ನಿಗದಿಪಡಿಸಿರುವ ಬೆಲೆಗೆ ಸಕ್ಕರೆ ಕಾರ್ಖಾನೆಗಳು ಕಬ್ಬನ್ನು ಖರೀದಿಸುತ್ತಿವೆಯೇ; ರೈತರಿಂದ ಕಬ್ಬನ್ನು ಖರೀದಿಸಿದ ತಕ್ಷಣ ಸಕ್ಕರೆ ಕಾರ್ಖಾನೆಗಳು ರೈತರಿಗೆ ಹಣ ಪಾವತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಶಿಥಿಲಗೊಂಡಿರುವ ಸರ್ಕಾರಿ ಶಾಲೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೫ (೧೦೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಶಿಥಿಲಗೊಂಡಿರುವ ಎಷ್ಟು ಸರ್ಕಾರಿ ಶಾಲೆಗಳನ್ನು ಪುನರ್ ನಿರ್ಮಾಣ / ರಿಪೇರಿ ಮಾಡಲಾಗಿದೆ; ಇಲ್ಲಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಇದಕ್ಕಾಗಿ ಖರ್ಚು ಮಾಡಲಾಗಿರುವ ಅನುದಾನವೆಷ್ಟು; (ಶಾಲಾವಾರು ಮಾಹಿತಿ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಶಿಥಿಲಗೊಂಡು ಬಳಕೆಗೆ ಯೋಗ್ಯವಿರದ ಸರ್ಕಾರಿ ಶಾಲೆಗಳೆಷ್ಟು; ಇಂತಹ ಶಾಲಾ–ಕಾಲೇಜುಗಳನ್ನು ನಡೆಸಲು ಬೇರೆ ವ್ಯವಸ್ಥೆ ಕಲ್ಪಿಸಲಾಗಿದೆಯೇ; ಈ ಶಾಲೆಗಳನ್ನು ಪುನರ್ ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಶಾಲಾವಾರು ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಶಾಲಾವಾರು ಮಾಹಿತಿ ನೀಡುವುದು)

## ಮಹಿಳೆಯರು, ಅಶಕ್ತರು ಮತ್ತು ಬಡವರಿಗೆ ನೀಡುತ್ತಿರುವ ಸೇವೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೬ (೧೦೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಮಹಿಳೆಯರು, ಬಡವರು ಮತ್ತು ಅಶಕ್ತರಿಗೆ ಒದಗಿಸುತ್ತಿರುವ ಆರೋಗ್ಯ ಸೇವೆಗಳು ಯಾವುವು; ಈ ಸೇವೆಗಳ ಸೌಲಭ್ಯ ಪಡೆಯಲು ಇರುವ ಮಾನದಂಡಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಖಾಯಿಲೆಗಳು ಹರಡದಂತೆ/ಬರದಂತೆ ತಡೆಗಟ್ಟಲು ಇರುವ ಮಾರ್ಗಗಳ ಬಗ್ಗೆ ಮತ್ತು ತುರ್ತು ಆರೋಗ್ಯ ಪರಿಸ್ಥಿತಿಗಳನ್ನು

ಎದುರಿಸಲು ಅನುಕೂಲವಾಗುವಂತೆ ಸಾರ್ವಜಕರಿಗೆ ಅರಿವು ಮೂಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು; ಈ ಕ್ರಮಗಳಿಂದ ಸಾರ್ವಜನಕರಿಗೆ ಅನುಕೂಲವಾಗಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಕಳೆದ ೩ ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ ? (ವಿವರ ನೀಡುವುದು)

## ವನ್ಯಜೀವಿಗಳ ಹಾವಳಿ ತಡೆಗಟ್ಟುವ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೭ (೧೦೪೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಆನೆ ತುಳಿತದಿಂದ ಉಂಟಾದ ಬೆಳೆಹಾನಿ ವಿವರ ನೀಡುವುದು ; ಹಾಗೂ ಬೆಳೆ ಹಾನಿ ಸಂತ್ರಸ್ಥರಿಗೆ ಸರ್ಕಾರ ನೀಡಿರುವ ಪರಿಹಾರದ ವಿವರ ನೀಡುವುದು ;

(ಆ) ವನ್ಯ ಜೀವಿಗಳು ಅರಣ್ಯ ದಾಟದಂತೆ ತಡೆಯಲು ರೈಲ್ವೇ ಹಳಿಗಳು ಹಾಗೂ ಸೋಲಾರ್ ಫನ್ಸಿಂಗ್‌ಗಳನ್ನು ಅಳವಡಿಸಲಾಗಿದೆಯೇ ; ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಸದರಿ ಕಾರ್ಯಗಳಿಗೆ ಮಂಜೂರಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು ; ಬಾಕಿ ಉಳಿಯಲು ಕಾರಣಗಳೇನು ; (ಉಪ ವಿಭಾಗವಾರು, ವಾರ್ಷಿಕವಾರು ಕಾಮಗಾರಿ ಸಹಿತ ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ವನ್ಯ ಮೃಗಗಳ ಕಳ್ಳಬೇಟೆ ಮತ್ತು ಅರಣ್ಯ ಸಂಪತ್ತು ಲೂಟಿ ನಡೆಸುತ್ತಿರುವವರ ವಿರುದ್ಧ ದಾಖಲಾಗಿರುವ ಕೇಸುಗಳೆಷ್ಟು ? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೮ (೧೦೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು; ಈ ಜಿಲ್ಲೆಗೆ ಅಗತ್ಯವಿರುವಷ್ಟು ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆಯೇ ; (ಅವುಗಳ ವಿವರವನ್ನು ತಾಲ್ಲೂಕುವಾರು ನೀಡುವುದು)

(ಆ) ಈ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಕಳೆದ ೩ ವರ್ಷಗಳಲ್ಲಿ ಸ್ವೀಕೃತವಾದ ಅರ್ಜಿಗಳೆಷ್ಟು ; ಇದರಲ್ಲಿ ಆಯ್ಕೆಯಾದ ಅರ್ಜಿಗಳೆಷ್ಟು; ಮತ್ತು ವಿದ್ಯಾರ್ಥಿನಿಲಯಕ್ಕೆ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿದ್ಯಾರ್ಥಿನಿಲಯವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಈ ವಿದ್ಯಾರ್ಥಿನಿಲಯಗಳ ನಿರ್ವಹಣೆಗಾಗಿ ಬಿಡುಗಡೆಯಾದ ಅನುದಾನವೆಷ್ಟು ; ಮತ್ತು ಖರ್ಚಾದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಹಾಸನ ಜಿಲ್ಲೆಗೆ ಅಗತ್ಯವಿರುವಷ್ಟು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆಯೇ; ಇಲ್ಲವಾದಲ್ಲಿ ಇನ್ನೂ ಎಷ್ಟು ವಿದ್ಯಾರ್ಥಿನಿಲಯಗಳ ಅವಶ್ಯಕತೆಯಿದೆ; ಅವಶ್ಯಕತೆ ಇರುವ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಆನೆಗಳ ಹಾವಳಿಯನ್ನು ತಡೆಯುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೯೫೯ (೧೧೭೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆನೆಗಳ ಹಾವಳಿಯನ್ನು ತಡೆಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; ಆನೆ ಹಾವಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು ; ೨೦೧೮-೧೯ ಮತ್ತು ೨೦೧೯-೨೦ರಲ್ಲಿ ಎಷ್ಟು ಪರಿಹಾರವನ್ನು ನೀಡಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದ ಅರಣ್ಯದಲ್ಲಿರುವ ಆನೆಗಳ ಸಂಖ್ಯೆ ಎಷ್ಟು ; ತಡೆಗೋಡೆಗಳ ಬೇಲಿಯನ್ನು ಹಾಕಲು ಸರ್ಕಾರ ಎಷ್ಟು ಹಣವನ್ನು ಖರ್ಚು ಮಾಡಿದೆ ; (ವಿವರ ನೀಡುವುದು)

(ಇ) ಅರಣ್ಯದಲ್ಲಿ ಭೇಟಿಯಾಡಿದ ಎಷ್ಟು ಪ್ರಕರಣಗಳು ದಾಖಲಾಗಿದೆ; ಭೇಟೆಯಾಡುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ೨೦೧೭-೧೮, ೨೦೧೮-೧೯ರಲ್ಲಿ ರಾಜ್ಯದಲ್ಲಿ ಮರಕಳ್ಳತನ ಮಾಡುವ ಎಷ್ಟು ಪ್ರಕರಣಗಳು ದಾಖಲಾಗಿದೆ ? (ವಿವರ ನೀಡುವುದು)

## ಅನುದಾನಿತ ಶಾಲೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೬೦ (೧೧೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಶಾಲೆಗಳಿಗೆ ಕಛೇರಿ ನಿರ್ವಹಣೆಗಾಗಿ ನೀಡಲಾಗುತ್ತಿದ್ದ ವಾರ್ಷಿಕ ರೂ. ೫,೦೦೦/–ಗಳನ್ನು ಮುಂದುವರಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಆ) ಹೆಚ್ಚುವರಿ ಶಿಕ್ಷಕರಿಗೆ ಅನುದಾನಿತ ಶಾಲೆಗಳಲ್ಲಿ ಇರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ; (ವಿವರ ನೀಡುವುದು)

(ಇ) ಅನುದಾನಿತ ಶಾಲೆಗಳಲ್ಲಿರುವ ಹೆಚ್ಚುವರಿ ಶಿಕ್ಷಕರ ಸಂಖ್ಯೆ ಎಷ್ಟು; ಹೆಚ್ಚುವರಿ ಶಿಕ್ಷಕರಿಗೆ ಯಾವ ಕೆಲಸ ಕಾರ್ಯಗಳನ್ನು ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಈ) ೨೦೧೯–೨೦ರಲ್ಲಿ ಅನುದಾನಿತ ಮತ್ತು ಸರ್ಕಾರ ಶಾಲೆಗಳ ನಿರ್ವಹಣೆಗಾಗಿ ಮತ್ತು ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರ ಖರ್ಚು ಮಾಡಿದ ವೆಚ್ಚ ಎಷ್ಟು ? (ಶಾಲಾವಾರು ವಿವರ ನೀಡುವುದು)

## ಅರೆಕಾಲಿಕ ಉಪನ್ಯಾಸಕರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೬೧ (೧೧೭೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅರೆಕಾಲಿಕ ಉಪನ್ಯಾಸಕರ (ಕಾಲೇಜು ಲೆಕ್ಚರರ್) ಸಂಖ್ಯೆ ಎಷ್ಟು ; ಖಾಯಂ ಇರುವ ಉಪನ್ಯಾಸಕರ ಸಂಖ್ಯೆ ಎಷ್ಟು;

(ಆ) ಅರೆಕಾಲಿಕ ಉಪನ್ಯಾಸಕರನ್ನು ಯಾವ ಮಾನದಂಡದಲ್ಲಿ ನೇಮಕಗೊಳಿಸಲಾಗುತ್ತಿದೆ ;

(ಇ) ೨೦೧೮-೧೯ ಹಾಗೂ ೨೦೧೯-೨೦ರಲ್ಲಿ ಯಾವ ಶೈಕ್ಷಣಿಕ ವರ್ಷದಲ್ಲಿ ಯಾವ ತಿಂಗಳಲ್ಲಿ ಅರೆಕಾಲಿಕ ಉಪನ್ಯಾಸಕರನ್ನು ನೇಮಕಗೊಳಿಸಲಾಗಿದೆ ; (ವಿವರ ನೀಡುವುದು)

(ಈ) ಮಂಗಳೂರಿನಲ್ಲಿ ಕಾರ್‌ಸ್ಟ್ರೀಟ್ ಪ್ರಥಮದರ್ಜೆ ಸರ್ಕಾರಿ ಕಾಲೇಜಿನಲ್ಲಿ ಇರುವ ಖಾಯಂ ಉಪನ್ಯಾಸಕರ ಸಂಖ್ಯೆ ಎಷ್ಟು ; ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು ; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಮಂಗಳೂರಿನ ಕಾರ್ಮಿಕ ಭವನ ನಿರ್ಮಾಣದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೯೬೨ (೧೧೭೪) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರಿನ ಕಾರ್ಮಿಕ ಭವನ ನಿರ್ಮಾಣಗೊಂಡು ವರ್ಷಗಳು ಕಳೆದರೂ, ಅದರಲ್ಲಿ ಕಛೇರಿ ಪ್ರಾರಂಭ ಮಾಡದಿರಲು ಕಾರಣವೇನು; (ವಿವರ ನೀಡುವುದು)

(ಆ) ಮಂಗಳೂರಿನ ಕಾರ್ಮಿಕ ಭವನಕ್ಕೆ ಕಳೆದ ಒಂದು ವರ್ಷದಿಂದ ಎಷ್ಟು ಬಾಡಿಗೆಯನ್ನು ಪಾವತಿಸಲಾಗಿದೆ ; ಸರ್ಕಾರಕ್ಕೆ ಉಂಟಾದ ನಷ್ಟವನ್ನು ಭರಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ;

(ಇ) ಕಾರ್ಮಿಕ ಹಿತರಕ್ಷಣೆಗೆ ಇಲಾಖೆಯಲ್ಲಿನ ಯೋಜನೆಗಳನ್ನು ಮುಟ್ಟಿಸಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಕಾರ್ಮಿಕ ಇಲಾಖೆಯಲ್ಲಿರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಹೆಚ್ಚುವರಿ ಕಾರ್ಮಿಕ ನ್ಯಾಯಾಲಯಗಳನ್ನು ಸ್ಥಾಪಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ? (ವಿವರ ನೀಡುವುದು)

## ಆರೋಗ್ಯ ಕರ್ನಾಟಕ ಆಯುಷ್ಮಾನ್ ಯೋಜನೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೯೬೩ (೧೧೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆರೋಗ್ಯ ಕರ್ನಾಟಕ ಆಯುಷ್ಮಾನ್ ಯೋಜನೆಯಡಿ ರಾಜ್ಯದಲ್ಲಿ ಎಷ್ಟು ಕಾರ್ಡ್‌ಗಳನ್ನು ವಿತರಿಸಲಾಗಿದೆ ; ಸರ್ಕಾರಿ ಆಸ್ಪತ್ರೆಗಳಿಂದ "ರೆಫರಲ್" ಪಡೆಯದೆ ನೇರವಾಗಿ ಖಾಸಗಿ ಆಸ್ಪತ್ರೆಗಳಿಗೆ ದಾಖಲಾದವರಿಗೆ ಈ ಯೋಜನೆ ಅನ್ವಯು ಸವಲತ್ತು ನಿರಾಕರಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ಕೆಲವು ಚಿಕಿತ್ಸೆಗಳು ಇರುವುದಿಲ್ಲ ಎಂದು ಖಾಸಗಿ ಆಸ್ಪತ್ರೆಗಳು ಚಿಕಿತ್ಸೆಗೆ ನಿರಾಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ೨೦೧೮-೧೯ ಮತ್ತು ೨೦೧೯-೨೦ರಲ್ಲಿ ಆರೋಗ್ಯ ಕರ್ನಾಟಕ ಚಿಕಿತ್ಸೆಗಾಗಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ರಾಜ್ಯ ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಆರೋಗ್ಯ ಕರ್ನಾಟಕ ಕಾರ್ಡ್‌ಗಳನ್ನು ವಿತರಿಸಲಾಗಿದೆ ; ವಿತರಿಸಬೇಕಾದ ಕಾರ್ಡ್‌ಗಳು ಎಷ್ಟು ? (ವಿವರ ನೀಡುವುದು)

## ಸಾಮಾಜಿಕ ಭದ್ರತಾ ಯೋಜನೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-**

೯೬೪ (೧೨೨೭) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಾಮಾಜಿಕ ಭದ್ರತಾ ಯೋಜನೆಯ ವಿವಿಧ ಯೋಜನೆಗಳಡಿಯಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳ ಜಿಲ್ಲಾವಾರು ವಿವರಗಳನ್ನು ನೀಡುವುದು ;

(ಆ) ಕಳೆದ ೦೩ ವರ್ಷಗಳಲ್ಲಿ ಯೋಜನಾ ಸೌಲಭ್ಯವನ್ನು ಪಡೆಯಲು ಅರ್ಹ ಫಲಾನುಭವಿಗಳಿಂದ ಬಂದ ಒಟ್ಟು ಅರ್ಜಿಗಳೆಷ್ಟು ; ಸೌಲಭ್ಯವನ್ನು ಮಂಜೂರು ಮಾಡಿದ ಮತ್ತು ಮಂಜೂರಾತಿಗಾಗಿ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ?

## ವಿಶ್ವವಿದ್ಯಾಲಯಕ್ಕೆ ಮಂಜೂರಾದ ಹುದ್ದೆಗಳು ಮತ್ತು ಖಾಲಿ ಹುದ್ದೆಗಳ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೯೬೪ (೧೨೨೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರಕ್ಕೆ ಸರ್ಕಾರದಿಂದ ಮಂಜೂರಾಗಿರುವ ಅನುದಾನವೆಷ್ಟು ;

(ಆ) ಈ ವಿಶ್ವವಿದ್ಯಾಲಯದ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳಿಗೆ ಸರ್ಕಾರದಿಂದ ಮಂಜೂರು ಮಾಡಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಸದರಿ ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಹುದ್ದೆಗಳೆಷ್ಟು ; ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು;

(ಈ) ಸದರಿ ಖಾಲಿ ಹುದ್ದೆಗಳನ್ನು ತುಂಬಲು ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಯಾವುದಾದರೂ ಕ್ರಮ ಕೈಗೊಂಡಿದೆಯೇ ?

## ಹಿಂದುಳಿದ ವರ್ಗಗಳ ಆಯೋಗದ ವರದಿ ಕುರಿತು

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೯೬೬ (೧೦೩೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನದ ೭೩ ಹಾಗೂ ೭೪ನೇ ತಿದ್ದುಪಡಿಯಂತೆ ಪ್ರತಿ ಹತ್ತು ವರ್ಷಕ್ಕೊಮ್ಮೆ ಜಾತಿವಾರು ಸಮೀಕ್ಷೆ ನಡೆಸಿ ಮೀಸಲಾತಿಯ

ಪ್ರಮಾಣದ ಪರಿಷ್ಕರಣೆಯಾಗಬೇಕೆಂದು ಸುಪ್ರೀಂ ಕೋರ್ಟಿನ ತೀರ್ಪು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಹಿಂದುಳಿದ ವರ್ಗಗಳ ಆಯೋಗದಿಂದ ೨೦೧೫ರ ಏಪ್ರಿಲ್-ಮೇ ತಿಂಗಳಲ್ಲಿ ಸಮೀಕ್ಷೆ ಪೂರ್ಣಗೊಳಿಸಿದ್ದರೂ ಸಹ ಸಮೀಕ್ಷೆಯ ಅಂಕಿ ಅಂಶಗಳನ್ನು ಬಿಡುಗಡೆ ಮಾಡದಿರಲು ಕಾರಣವೇನು ; ಇದರಿಂದ ಸರ್ಕಾರಕ್ಕೇನಾದರೂ ತೊಂದರೆಯಿದೆಯೇ ; (ವಿವರ ನೀಡುವುದು)

(ಇ) ಜಾತಿವಾರು ಸಮೀಕ್ಷೆ ನಡೆಸಿ, ಅವಕಾಶ ವಂಚಿತ ವರ್ಗಗಳಿಗೆ ಸಾಮಾಜಿಕ ನ್ಯಾಯ ಒದಗಿಸುವುದು ಸರ್ಕಾರದ ಜವಾಬ್ದಾರಿಯಲ್ಲವೆ ; ಹಾಗೂ ಇದು ಓಬಿಸಿ ವರ್ಗಗಳಿಗೆ ಮಾಡಿರುವ ವಂಚನೆಯಲ್ಲವೆ ; ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿರುವುದಕ್ಕೆ ಕಾರಣವೇನು ;

(ಈ) ಎಷ್ಟು ದಿನಗಳಲ್ಲಿ ಈ ವರದಿಯನ್ನು ಜಾರಿಗೊಳಿಸಿ ಓಬಿಸಿ ವರ್ಗಗಳ ಅವಕಾಶ ವಂಚಿತರಿಗೆ ಸಾಮಾಜಿಕ ನ್ಯಾಯ ಒದಗಿಸಲಾಗುವುದು?

## ಐ.ಟಿ.ಬಿ.ಟಿ. ಕಂಪನಿಗಳನ್ನು ಜಿಲ್ಲಾ ಕೇಂದ್ರಗಳಲ್ಲಿ ತೆರೆಯುವ ಕುರಿತು

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೬೭ (೧೦೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರಿನಲ್ಲಿರುವ ಐ.ಟಿ. ಮತ್ತು ಬಿ.ಟಿ. ಉದ್ಯಮಗಳ ಸಂಖ್ಯೆ ಎಷ್ಟು ; ಅವು ಯಾವುವು ; ಸಂಪೂರ್ಣ ವಿಳಾಸ, ದೂರವಾಣಿ ಸಂಖ್ಯೆ ಮತ್ತು ಆ ಕಂಪನಿ ಮಾಲೀಕರ ಹೆಸರು ಸಮೇತವಾಗಿ ಮಾಹಿತಿ ನೀಡುವುದು ;

(ಆ) ಈ ಕಂಪನಿಗಳಿಗೆ ಭೂಮಿ/ನೀರು/ವಿದ್ಯುತ್ ಮತ್ತು ಇತರೆ ಸೌಲಭ್ಯಗಳನ್ನು ಅತ್ಯಂತ ಕಡಿಮೆ ದರದಲ್ಲಿ ನೀಡಲಾಗಿದೆಯೇ ; ಮತ್ತು ತೆರಿಗೆಯಲ್ಲಿ ವಿನಾಯಿತಿ ನೀಡಲಾಗಿದೆಯೇ ; ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು ;

(ಇ) ಈ ರೀತಿ ತೆರಿಗೆ ವಿನಾಯಿತಿ/ಕಡಿಮೆ ದರದಲ್ಲಿ ಸೌಲಭ್ಯಗಳನ್ನು ನೀಡಿರುವುದರಿಂದ ರಾಜ್ಯ ಸರ್ಕಾರದ ಆದಾಯಕ್ಕೆ ಆಗಿರುವ ಒಟ್ಟು ನಷ್ಟ ಎಷ್ಟು ; ವಿವರವಾದ ಮಾಹಿತಿ ಒದಗಿಸುವುದು ;

(ಈ) ಈ ಉದ್ಯಮಗಳಲ್ಲಿ ಕೆಲಸ ಮಾಡುತ್ತಿರುವ ಒಟ್ಟು ಅಧಿಕಾರಿ/ ನೌಕರರ ಸಂಖ್ಯೆ ಎಷ್ಟು ; ಮತ್ತು ಕರ್ನಾಟಕ/ಕನ್ನಡದ ಅಧಿಕಾರಿ/ ನೌಕರರ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಉ) ರಾಜ್ಯದ ರಾಜಧಾನಿಗೆ ಹತ್ತಿರವಿರುವ ಇತರೆ ಜಿಲ್ಲೆಗಳಲ್ಲಿ ಈ ಉದ್ಯಮಗಳನ್ನು ಸ್ಥಾಪಿಸುವಂತೆ ಖಾಸಗಿಯವರಿಗೆ ಪ್ರೋತ್ಸಾಹಿಸಲು ಸರ್ಕಾರಕ್ಕಿರುವ ತೊಂದರೆ ಏನು ; (ವಿವರ ನೀಡುವುದು)

(ಊ) ಬೆಂಗಳೂರಿನಲ್ಲಿ ಮಿತಿ ಮೀರಿ ಬೆಳೆಯುತ್ತಿರುವ ಜನಸಂಖ್ಯೆ ಮತ್ತು ಟ್ರಾಫಿಕ್ ಸಮಸ್ಯೆಗಳಿರುವುದರಿಂದ ಮತ್ತು ಬೇರೆ ಜಿಲ್ಲೆಗಳಿಂದ ಜನರು ವಲಸೆ ಬರುವುದನ್ನು ತಪ್ಪಿಸುವ ಸಲುವಾಗಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ರಾಜಧಾನಿಗೆ ಹತ್ತಿರವಿರುವ ತುಮಕೂರು, ಹಾಸನ, ಮಂಡ್ಯ, ಮೈಸೂರು, ಶಿವಮೊಗ್ಗ, ಮಂಗಳೂರು, ಬೆಳಗಾಂ ಮತ್ತು ಧಾರವಾಡದಂತಹ ಜಿಲ್ಲೆಗಳಲ್ಲಿ ಇಂತಹ ಉದ್ಯಮಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ರಾಜ್ಯದ ವಿಶ್ವವಿದ್ಯಾಲಯಗಳ ಕುಲಪತಿಗಳ ನೇಮಕಾತಿ ಕುರಿತು.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೮ (೧೧೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹಲವಾರು ವಿಶ್ವವಿದ್ಯಾಲಯಗಳಲ್ಲಿ ಉಪ ಕುಲಪತಿಗಳ ಹುದ್ದೆ ಖಾಲಿ ಇದ್ದಾಗ ಅನೇಕ ಬಾರಿ ತಾತ್ಕಾಲಿಕವಾಗಿ ಉಪ ಕುಲಪತಿಗಳನ್ನು ನೇಮಕ ಮಾಡಲಾಗುತ್ತಿದ್ದು, ಅವರುಗಳಿಗೆ ಪೂರ್ಣ ಪ್ರಮಾಣದ ಅಧಿಕಾರದ ಕೊರತೆಯಿಂದಾಗಿ ಆಡಳಿತದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದರ ಸುಧಾರಣೆಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ಪದ್ಧತಿಯನ್ನು ನಿಲ್ಲಿಸಲು ಒಬ್ಬ ಕುಲಪತಿಯ ಅವಧಿ ಮುಗಿಯುವ ಮೊದಲೇ ಹೊಸ ಕುಲಪತಿಗಳ ನೇಮಕಾತಿ ಪ್ರಕ್ರಿಯೆ ಮುಗಿಸಿ ಸ್ಥಿರ ಆಡಳಿತ ನೀಡುವ ಕುರಿತು ಸರ್ಕಾರದ ನಿಲುವೇನು;

(ಈ) ರಾಜ್ಯದಲ್ಲಿ ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಕುಲಪತಿಗಳ ಹುದ್ದೆಗಳು ಖಾಲಿ ಇವೆ ; ಇದ್ದಲ್ಲಿ, ಇವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು ?

# ಬೆಳಗಾವಿ ಜಿಲ್ಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿನ ವೈದ್ಯರ ಕೊರತೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೯ (೧೧೯೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿನ ಹಲವಾರು ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಇರುವ ಒಟ್ಟು ಸರ್ಕಾರಿ ಆಸ್ಪತ್ರೆಗಳೆಷ್ಟು ; ಸದರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ ವಿವಿಧ ವೃಂದದ ಹಾಗೂ ವಿವಿಧ ವಿಭಾಗದ ವೈದ್ಯರುಗಳ ಹುದ್ದೆಗಳೆಷ್ಟು ;

(ಈ) ಜಿಲ್ಲೆಯ ಯಾವ ಯಾವ ಆಸ್ಪತ್ರೆಗಳಲ್ಲಿ ಯಾವ ಯಾವ ವೃಂದದ ವೈದ್ಯರುಗಳ ಹುದ್ದೆಗಳು ಖಾಲಿ ಇವೆ ; (ವಿವರ ಒದಗಿಸುವುದು)

(ಉ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

# ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳ ಹಾಗೂ ಲ್ಯಾಬ್‌ಗಳ ಕೊರತೆ ಕುರಿತು,

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**
೯೭೦ (೧೧೯೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆಯ ಹಲವಾರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗಕ್ಕೆ ಬೇಕಾದ ಅಗತ್ಯ ಲ್ಯಾಬ್‌ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ ; ವಿವಿಧ ಐಚ್ಛಿಕ ವಿಷಯಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಎಷ್ಟು; (ವಿಭಾಗವಾರು ಮಾಹಿತಿ ನೀಡುವುದು)

(ಈ) ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳಿಲ್ಲದೇ ಇರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ;

(ಉ) ಸದರಿ ಮೂಲಭೂತ ಸೌಲಭ್ಯ ವಂಚಿತ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸುಸಜ್ಜಿತ ಮೂಲಭೂತ ಸೌಲಭ್ಯಗಳನ್ನು ಯಾವ ಕಾಲಮಿತಿಯಲ್ಲಿ ಒದಗಿಸಲಾಗುವುದು ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆ ಸರ್ಕಾರಿ ಶಾಲೆಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೧ (೧೧೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಅನೇಕ ಸರ್ಕಾರಿ ಶಾಲೆಗಳು ಶಿಕ್ಷಕರ ಕೊರತೆ ಎದುರಿಸುತ್ತಿದ್ದು, ಇದರಿಂದಾಗಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಜಿಲ್ಲೆಯ ಸರ್ಕಾರಿ ಶಾಲೆಗಳಿಗೆ ಗುಣಮಟ್ಟದ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು ಸೇರಿದಂತೆ ಒಟ್ಟು ಎಷ್ಟು ಸರ್ಕಾರಿ ಶಾಲೆಗಳಿವೆ ; ಆ ಶಾಲೆಗಳಲ್ಲಿ ಒಟ್ಟು ಎಷ್ಟು ಮಂದಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ; (ತಾಲ್ಲೂಕುವಾರು ವಿವರ ಒದಗಿಸುವುದು)

(ಈ) ಸದರಿ ಸರ್ಕಾರಿ ಶಾಲೆಗಳಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು ; ಅವುಗಳಲ್ಲಿ ಭರ್ತಿಯಾದ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ;

(ಉ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ; ಮತ್ತು ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ಮಾಹಿತಿ ನೀಡುವುದು)

## ವೃತ್ತಿಪರ ಕೋರ್ಸ್‌ಗಳಿಗೆ ಆನ್‌ಲೈನ್ ಪರೀಕ್ಷೆ ನಡೆಸುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೨ (೧೧೯೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂಜಿನಿಯರಿಂಗ್ ಸೇರಿದಂತೆ ಇನ್ನಿತರ ವೃತ್ತಿಪರ ಕೋರ್ಸ್‌ಗಳಿಗೆ ಪ್ರವೇಶ ಕಲ್ಪಿಸುವ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಯನ್ನು ೨೦೨೦ರಲ್ಲಿ ಆನ್‌ಲೈನ್‌ನಲ್ಲಿ ನಡೆಸುವ ಕುರಿತು ಸರ್ಕಾರದ ತೀರ್ಮಾನವೇನು ;

(ಆ) ಆನ್‌ಲೈನ್‌ನಲ್ಲಿ ಪರೀಕ್ಷೆ ನಡೆಸುವ ಕುರಿತು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸೂಚನೆ ನೀಡಲಾಗಿದೆಯೇ ;

(ಇ) ಆನ್‌ಲೈನ್ ಪರೀಕ್ಷೆ ಕುರಿತು ನಗರ ಹಾಗೂ ಗ್ರಾಮೀಣ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗಿದೆಯೇ ?

## ವಿಶೇಷ ಭತ್ಯೆ ಮಂಜೂರಾತಿ ನೀಡುವ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೯೭೩ (೧೧೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ : ೦೧–೦೮–೨೦೦೮ರ ನಂತರ ನೇಮಕಗೊಂಡ ಹಾಗೂ ಬಡ್ತಿ ಪಡೆದ ಶಿಕ್ಷಕರಿಗೆ ಹಾಗೂ ಪದವಿಪೂರ್ವ ಕಾಲೇಜಿನ ಉಪನ್ಯಾಸಕರಿಗೆ ವಿಶೇಷ ಭತ್ಯೆ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ವಿಶೇಷ ಭತ್ಯೆಯನ್ನು ಹಿಂಪಡೆಯಲು ಸರ್ಕಾರ ಆದೇಶ ಹೊರಡಿಸಿರುವುದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ಹಿಂಪಡೆಯುವ ಸಂಬಂಧ ಮಾಡಿರುವ ಆದೇಶವನ್ನು ರದ್ದುಗೊಳಿಸಲು ಸರ್ಕಾರ ಚಿಂತಿಸುವುದೇ ;

(ಈ) ಹಾಗಾದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕಾಲಮಿತಿ ವೇತನ ಬಡ್ತಿ ಮಂಜೂರಾತಿ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೯೭೪ (೧೧೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ, ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಪಡೆದ ಶಿಕ್ಷಕರಿಗೆ ಕಾಲಮಿತಿ ವೇತನ ಬಡ್ತಿ ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಡ್ತಿ ಪಡೆದ ಶಿಕ್ಷಕರಿಗೆ ಕಾಲಮಿತಿ ವೇತನ ಬಡ್ತಿ ನೀಡದೇ ಇರುವುದರಿಂದ ಇವರು ಆರ್ಥಿಕ ಸವಲತ್ತಿನಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಶಿಕ್ಷಕರಿಗೆ ಕಾಲಮಿತಿ ವೇತನ ಬಡ್ತಿ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯಾವ ಕಾಲಮಿತಿಯಲ್ಲಿ ವೇತನ ಬಡ್ತಿ ಸೌಲಭ್ಯ ಕಲ್ಪಿಸಲಾಗುವುದು ?

## ಸಹ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಬಡ್ತಿ ನೀಡುವ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೯೭೫ (೧೧೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢಶಾಲಾ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ಹುದ್ದೆಗೆ ಕಳೆದ ಆರು ವರ್ಷಗಳಿಂದ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಬಡ್ತಿ ನೀಡುವಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಬಡ್ತಿ ನೀಡಲು ವಿಳಂಬವಾಗಿರುವುದರಿಂದ ಅರ್ಹ ಸಹ ಶಿಕ್ಷಕರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಡ್ತಿ ನೀಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಬಡ್ತಿ ನೀಡಲಾಗುವುದು ?

## ಅರ್ಹ ಸಹ ಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೯೭೬ (೧೧೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಹಾಗೂ ಬೆಂಗಳೂರು ವಿಭಾಗದ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಸಹ ಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲು ವಿಳಂಬ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿಳಂಬದಿಂದ ಅರ್ಹ ಸಹ ಶಿಕ್ಷಕರು ಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮುಖ್ಯ ಶಿಕ್ಷಕರ ಹುದ್ದೆಯ ಬಡ್ತಿ ವಿಳಂಬಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಈ) ಸದರಿ ಅರ್ಹ ಮುಖ್ಯ ಶಿಕ್ಷಕರಿಗೆ ಯಾವ ಕಾಲಮಿತಿಯಲ್ಲಿ ಬಡ್ತಿ ಸೌಲಭ್ಯ ನೀಡಲಾಗುವುದು ?

## ಬೆಳಗಾವಿ ವಿಭಾಗದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿನಿಲಯಗಳ ಕುರಿತು

**ಶ್ರೀ ನಿರಾಣಿ ಹನುಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೯೭೭ (೧೦೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಬೆಳಗಾವಿ ವಿಭಾಗದಲ್ಲಿ ಒಟ್ಟು ಎಷ್ಟು ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ ; (ಮೆಟ್ರಿಕ್, ಪೂರ್ವ, ಮೆಟ್ರಿಕ್ ನಂತರದ ಹಾಗೂ ಪದವಿ) ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತವೆ; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳೆಷ್ಟು ;

(ಇ) ಬಾಡಿಗೆ ಕಟ್ಟಡಗಳಲ್ಲಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ಇನ್ನಾದರು ಸರ್ಕಾರ ಸ್ವಂತ ಕಟ್ಟಡ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವುದೇ ? (ಸಂಪೂರ್ಣ ಮಾಹಿತಿ ನೀಡುವುದು)

## ಪ್ರೌಢ ಶಾಲೆಗಳಲ್ಲಿನ ಸಹ ಶಿಕ್ಷಕರಿಗೆ ಬಡ್ತಿ ನೀಡುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೯೭೮ (೧೧೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿನ ಅರ್ಹ ಸಹ ಶಿಕ್ಷಕರುಗಳಿಗೆ ಪದವಿಪೂರ್ವ ಕಾಲೇಜಿನ ಉಪನ್ಯಾಸಕರಿಗೆ ಬಡ್ತಿ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಆ) ಇಂತಹ ಅರ್ಹ ಸಹ ಶಿಕ್ಷಕರುಗಳಿಗೆ ಯಾವ ಕಾಲಮಿತಿಯೊಳಗೆ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ಬಡ್ತಿ ನೀಡಲಾಗುವುದು ?

## ಸಹಶಿಕ್ಷಕರಿಗೆ ಮುಖ್ಯೋಪಾಧ್ಯಾಯರಾಗಿ ಬಡ್ತಿ ನೀಡಲು ವಿಳಂಬ ಧೋರಣೆ ಅನುಸರಿಸುತ್ತಿರುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೯೭೯ (೧೧೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಲ್ಲಿನ ಸಹ ಶಿಕ್ಷಕರಿಗೆ ಮುಖ್ಯೋಪಾಧ್ಯಾಯರಾಗಿ ಬಡ್ತಿ ನೀಡಲು ವಿಳಂಬಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅರ್ಹ ಸಹ ಶಿಕ್ಷಕರನ್ನು ಮುಖ್ಯೋಪಾಧ್ಯಾಯರಾಗಿ ಬಡ್ತಿ ನೀಡಲಾಗುವುದು ?

## ಪದವಿ ಕಾಲೇಜುಗಳ ಕಲಾ ವಿಭಾಗದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿರುವ ಬಗ್ಗೆ

**ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೯೮೦ (೧೧೯೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳ ಕಲಾ ವಿಭಾಗದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಿವರಗಳನ್ನು ಕಾಲೇಜುವಾರು ನೀಡುವುದು ;

(ಇ) ವಾಣಿಜ್ಯ ವಿಭಾಗ, ವಿಜ್ಞಾನ ವಿಭಾಗದ ರೀತಿಯಲ್ಲಿ ಕಲಾ ವಿಭಾಗವನ್ನು ಸಹ ಆಸಕ್ತಿದಾಯಕ/ವೈಜ್ಞಾನಿಕವಾಗಿ ಪಠ್ಯಕ್ರಮ (ಕರಿಕುಲ್ಯಂ) ಪುನರುಜ್ಜೀವನಗೊಳಿಸಲು ಸರ್ಕಾರವು ಯೋಚಿಸಿದೆಯೇ;

(ಈ) ಯೋಚಿಸಿದ್ದರೆ, ಅದರ ವಿವರಗಳನ್ನು ನೀಡುವುದು ?

## ವಿಶ್ವೇಶ್ವರಯ್ಯ ತಾಂತ್ರಿಕ ಮಹಾ ವಿಶ್ವವಿದ್ಯಾಲಯದ ಕಟ್ಟಡದ ವಿಸ್ತೀರ್ಣದ ಬಗ್ಗೆ

**ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೯೮೧ (೧೨೦೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವೇಶ್ವರಯ್ಯ ತಾಂತ್ರಿಕ ಮಹಾ ವಿಶ್ವವಿದ್ಯಾಲಯ, ಚಿಕ್ಕಬಳ್ಳಾಪುರ ಕ್ಯಾಂಪಸ್‌ನಲ್ಲಿ ಕಟ್ಟಲಾಗಿರುವ ಕಟ್ಟಡಗಳ ವಿಸ್ತೀರ್ಣ ಎಷ್ಟು ; ಕಟ್ಟಡವಾರು (ಬ್ಲಾಕ್‌ವೈಸ್) ವಿವರ ನೀಡುವುದು ;

(ಆ) ಈ ಕಟ್ಟಡ ಕಟ್ಟಲು ವಿನಿಯೋಗಿಸಲಾಗಿರುವ ಹಣ ಪ್ರಮಾಣ ಎಷ್ಟು ;

(ಇ) ಯಾವ ಉದ್ದೇಶಕ್ಕಾಗಿ ಕಟ್ಟಡಗಳನ್ನು ಕಟ್ಟಲಾಗಿದೆ ;

(ಈ) ಅನೇಕ ಕಟ್ಟಡಗಳು ಪೂರ್ಣಗೊಳ್ಳದಿರುವುದು ಹಾಗೂ ಪೂರ್ಣಗೊಂಡಿರುವ ಕಟ್ಟಡವನ್ನು ಉಪಯೋಗಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಈ ಕ್ಯಾಂಪಸ್‌ನಲ್ಲಿ ನಡೆಸುತ್ತಿರುವ ಕೋರ್ಸ್‌ಗಳು ಯಾವುವು; ಎಷ್ಟು ವಿದ್ಯಾರ್ಥಿಗಳು ಇಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ ?

## ವೈದ್ಯಕೀಯ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡದಿರುವ ಬಗ್ಗೆ

ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–

೯೮೨ (೧೨೦೧) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಪೂಜಿ ವೈದ್ಯಕೀಯ ಕಾಲೇಜು, ದಾವಣಗೆರೆ, ಹಾಗೂ ಕೆ.ಎಂ.ಸಿ. ವೈದ್ಯಕೀಯ ಕಾಲೇಜು, ಮಂಗಳೂರು ಇಲ್ಲಿ ವ್ಯಾಸಂಗ ಮಾಡುತ್ತಿರುವ (ಹೌಸ್ ಸರ್ಜನ್/ಪಿ.ಜಿ. ವಿದ್ಯಾರ್ಥಿ) ವಿದ್ಯಾರ್ಥಿಗಳು ಸರ್ಕಾರ ನೀಡುತ್ತಿರುವ ಶಿಷ್ಯವೇತನ (ಸ್ಟೈಫಂಡ್) ನಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; (ವಿವರಗಳನ್ನು ನೀಡುವುದು)

(ಇ) ಮೇಲ್ಕಂಡ ವಿದ್ಯಾರ್ಥಿಗಳಿಗೆ ಶಿಷ್ಯವೇತನ (ಸ್ಟೈಫಂಡ್) ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ?

## ಅಜಿನೊಮೊಟೊ (Tasting Powder) ನಿಷೇಧಿಸುವ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೩ (೧೦೫೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡುಗೆಗೆ ರುಚಿವರ್ಧಕ ಅಂಶವಾಗಿ ಬಳಕೆಯಾಗುತ್ತಿರುವ "ಅಜಿನೊಮೊಟೊ" **(Tasting Powder)** ಅನ್ನು ಮತ್ತು ಇತರೆ ರುಚಿವರ್ಧಕಗಳನ್ನು ರಾಜ್ಯದಲ್ಲಿ ಸಂಪೂರ್ಣವಾಗಿ ನಿಷೇಧಿಸುವ ವಿಷಯ ಸರ್ಕಾರದ ಮುಂದೆ ಇದೆಯೇ;

(ಆ) ಇದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರುಚಿವರ್ಧಕಗಳನ್ನು ಬಳಸುವುದರಿಂದ ಆರೋಗ್ಯ ಸಮಸ್ಯೆಗಳು ಉಂಟಾಗುವ ಸಾಧ್ಯತೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಇದ್ದಲ್ಲಿ, ಈ ಕುರಿತು ತೆಗೆದುಕೊಂಡ ಕ್ರಮವೇನು; (ಸಂಪೂರ್ಣ ಮಾಹಿತಿ ನೀಡುವುದು)

(ಈ) "ಅಜಿನೊಮೊಟೊ" **(Tasting Powder)** ಅನ್ನು ಮತ್ತು ಇತರೆ ರುಚಿವರ್ಧಕಗಳನ್ನು ರಾಜ್ಯದಲ್ಲಿ ಸಂಪೂರ್ಣವಾಗಿ ಯಾವ ಕಾಲಮಿತಿಯಲ್ಲಿ ನಿಷೇಧಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಜೇಷ್ಠತಾ ಪಟ್ಟಿ ಪ್ರಕಟಿಸಿ ಮುಂಬಡ್ತಿ ನೀಡುವ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೪ (೧೦೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದ್ವಿತೀಯ ದರ್ಜೆ ಸಹಾಯಕರ ವೃಂದದಿಂದ ಪ್ರಥಮ ದರ್ಜೆ ಸಹಾಯಕರ ವೃಂದಕ್ಕೆ ಮುದ್ರಣ, ಲೇಖನ ಸಾಮಗ್ರಿ ಇಲಾಖೆಯಲ್ಲಿ ಕಳೆದ ೧೦ ವರ್ಷಗಳಿಂದ ಜೇಷ್ಠತಾ ಪಟ್ಟಿ ತಯಾರಿಸಲಾಗಿದೆಯೇ; ಜೇಷ್ಠತಾ ಪಟ್ಟಿ ತಯಾರಿಸಿದ್ದಲ್ಲಿ ಸಂಪೂರ್ಣ ವಿವರಗಳ ಮಾಹಿತಿ ನೀಡುವುದು ;

(ಆ) ಸದರಿ ಇಲಾಖೆಯಲ್ಲಿ ಪ್ರಸ್ತುತ ಇರುವ ಗ್ರೂಪ್ ಎ.ಬಿ.ಸಿ.ಡಿ ಹುದ್ದೆಗಳ ಮತ್ತು ಖಾಲಿ ಇರುವ ಹುದ್ದೆಗಳ ವಿವರಗಳ (ಜಿಲ್ಲಾವಾರು) ಮಾಹಿತಿ ನೀಡುವುದು ;

(ಇ) ಸದರಿ ಇಲಾಖೆಯಲ್ಲಿ ಗ್ರೂಪ್ ಎ.ಬಿ.ಸಿ.ಡಿ ಹುದ್ದೆಗಳಿಗೆ ಕಳೆದ ೧೦ ವರ್ಷಗಳಿಂದ ಮುಂಬಡ್ತಿ ನೀಡಲಾಗಿದೆಯೇ; ಮುಂಬಡ್ತಿ ನೀಡಿದ್ದಲ್ಲಿ ಯಾವ ಯಾವ ಹುದ್ದೆಗಳಿಗೆ ನೀಡಲಾಗಿದೆ ; (ಸಂಪೂರ್ಣ ವಿವರಗಳ ಮಾಹಿತಿ ನೀಡುವುದು)

(ಈ) ಇಲಾಖೆಗಳಲ್ಲಿ ಗ್ರೂಪ್ "ಸಿ" ಹುದ್ದೆಗಳಲ್ಲಿ ಮುಂಬಡ್ತಿ ನೀಡಲು ಇರುವ ತೊಂದರೆಗಳೇನು ಹಾಗೂ ಗ್ರೂಪ್ "ಎ.ಬಿ.ಸಿ." ನೌಕರರ ಜೇಷ್ಠತಾ ಪಟ್ಟಿಯನ್ನು ಪ್ರತಿ ವರ್ಷ ಪ್ರಕಟಿಸಲಾಗಿದೆಯೇ ; ವರ್ಷವಾರು ಸಂಪೂರ್ಣ ವಿವರ ನೀಡುವುದು ; ಸದರಿ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ;

(ಉ) ಅಂತರ್ಜಾಲದಲ್ಲಿ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಸರ್ಕಾರಕ್ಕಿರುವ ಅಡಚಣೆಗಳೇನು ?

## ಆರೋಗ್ಯ ಭವನಕ್ಕೆ ಇಲಾಖೆಗಳನ್ನು ಸ್ಥಳಾಂತರಿಸುವ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೫ (೧೦೩೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕರ ಅನುಕೂಲಕ್ಕಾಗಿ ಬೆಂಗಳೂರಿನ ಆರೋಗ್ಯ ಇಲಾಖೆಯ ಎಲ್ಲಾ ಕಛೇರಿಗಳನ್ನು ಮಾಗಡಿ ರಸ್ತೆಯಲ್ಲಿರುವ "ಆರೋಗ್ಯ ಭವನ"ಕ್ಕೆ ಸ್ಥಳಾಂತರಿಸಲು ಸರ್ಕಾರಕ್ಕೆ ಇರುವ ಅಡೆತಡೆಗಳೇನು ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರತಿ ಒಬ್ಬ ವಿಷಯ ನಿರ್ವಾಹಕರಲ್ಲಿ ವಿಲೇವಾರಿಗೆ ಬಾಕಿ ಇರುವ ಕಡತಗಳ ಸಂಪೂರ್ಣ ವಿವರ ಒದಗಿಸುವುದು;

(ಇ) ಆರೋಗ್ಯ ಇಲಾಖೆಯ ಆಹಾರ ಸುರಕ್ಷತಾ ವಿಭಾಗದಲ್ಲಿ ಕಳೆದ ಮೂರು ವರ್ಷಗಳಿಂದ ನಿಗದಿತ ಐದಕ್ಕಿಂತ ಕಡಿಮೆ ಸ್ಯಾಂಪಲ್ಸ್‌ಗಳನ್ನು ತೆಗೆದು ಕಳಪೆ ಸಾಧನೆ ತೋರಿರುವ ಆಹಾರ ಸುರಕ್ಷತಾಧಿಕಾರಿಗಳು/ಅಂಕಿತಾಧಿಕಾರಿಗಳ ವಿವರ ಒದಗಿಸುವುದು; ಸದರಿಯವರ ವಿರುದ್ಧ ಕೈಗೊಂಡ ಕ್ರಮಗಳೇನು; ವಿಭಾಗದಲ್ಲಿ ವಿಲೇವಾರಿಗೆ ಬಾಕಿ ಇರುವ ಕಡತಗಳ ಸಂಪೂರ್ಣ ವಿವರ ನೀಡುವುದು;

(ಈ) ಆಹಾರ ಸುರಕ್ಷತಾ ವಿಭಾಗಕ್ಕೆ ಸಂಬಂಧಿಸಿದಂತೆ ಯಾವ ಯಾವ ಘನ ನ್ಯಾಯಾಲಯಗಳಲ್ಲಿ ಯಾವ ಯಾವ ಕೇಸುಗಳು ಮೊಕದ್ದಮೆಗಳು ವಿಚಾರಣೆಗೆ ಬಾಕಿ ಇವೆ; ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ; (ಸಂಪೂರ್ಣ ವಿವರ ಒದಗಿಸುವುದು)

(ಉ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಆಹಾರ ಸುರಕ್ಷತಾಧಿಕಾರಿಗಳನ್ನು ಆಹಾರ ಸುರಕ್ಷತಾ ವಿಭಾಗದಲ್ಲಿಯೇ ವಿಲೀನಗೊಳಿಸಲು ಇರುವ ತೊಂದರೆ ಏನು; ಹಾಗಿದ್ದಲ್ಲಿ, ಈ ಬಗ್ಗೆ ಯಾವಾಗ ಆದೇಶ ಹೊರಡಿಸಲಾಗುವುದು ; (ವಿವರ ನೀಡುವುದು) ಈ ವಿಭಾಗದಲ್ಲಿ ಅಮಾನತ್ತುಗೊಂಡಿರುವ ಶಿಸ್ತುಕ್ರಮ ಎದುರಿಸುತ್ತಿರುವವರ ವಿವರ ನೀಡುವುದು; ಅಮಾನತ್ತುಗೊಂಡಿರುವವರನ್ನು ಪುನಃ ಇದೇ ವಿಭಾಗಕ್ಕೆ ನೇಮಕ ಮಾಡಿಕೊಳ್ಳಲು ಸರ್ಕಾರಕ್ಕೆ ಇರುವ ತೊಂದರೆ ಏನು ? (ವಿವರ ನೀಡುವುದು)

## ಕಾರ್ಮಿಕರ ಸೌಲಭ್ಯಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೬ (೧೦೩೨) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಇಲಾಖೆಯಿಂದ ಕಾರ್ಮಿಕರಿಗೆ ಸಿಗುವ ಸೌಲಭ್ಯಗಳೇನು; ಅವುಗಳನ್ನು ಪಡೆಯಲು ಇರುವ ಮಾನದಂಡಗಳೇನು ;

(ಆ) ಪ್ರಸ್ತುತ ಯಾವ ಯಾವ ಜಿಲ್ಲೆಗಳಲ್ಲಿ ಈ ಯೋಜನೆಗಳು ಜಾರಿಯಲ್ಲಿದೆ ;

(ಇ) ಬೀದರ್ ಜಿಲ್ಲೆಯಲ್ಲಿ ಇರುವ ಕಾರ್ಮಿಕರ ಸಂಖ್ಯೆ ಎಷ್ಟು ; ಎಷ್ಟು ಕಾರ್ಮಿಕರು ಈ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ ; (ತಾಲ್ಲೂವಾರು ಫಲಾನುಭವಿಗಳವಾರು ವಿವರ ನೀಡುವುದು)

(ಈ) ಸದರಿ ಯೋಜನೆಗಳಿಂದ ಎಷ್ಟು ಕಾರ್ಮಿಕರು ವಂಚಿತರಾಗಿದ್ದಾರೆ ಈ ಬಗ್ಗೆ ಸರ್ಕಾರ ಕೈಗೊಂಡ ಮಹತ್ವದ ಕ್ರಮಗಳೇನು ? ಸ್ಪಷ್ಟವಾದ ಮಾಹಿತಿ ನೀಡುವುದು ;

## ಅರಣ್ಯ ಇಲಾಖೆಯ ಸೌಲಭ್ಯಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೭ (೧೦೩೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಇಲಾಖೆಯಲ್ಲಿರುವ ಕೇಂದ್ರ/ರಾಜ್ಯ ಸರ್ಕಾರದ ವಿವಿಧ ಯೋಜನೆಗಳು ಯಾವುವು; ಸದರಿ ಸೌಲಭ್ಯಗಳನ್ನು ಪಡೆಯಲು ಯಾರು ಅರ್ಹತೆಯನ್ನು ಹೊಂದಿರುತ್ತಾರೆ ; ಅವುಗಳಿಗೆ ಅನುಸರಿಸಬೇಕಾದ ಮಾನದಂಡಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ಬೀದರ್ ಜಿಲ್ಲೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಇಲಾಖಾ ವತಿಯಿಂದ ವಿವಿಧ ಯೋಜನೆಗಳಲ್ಲಿ ಸೌಲಭ್ಯವನ್ನು ಪಡೆದ ಫಲಾನುಭವಿಗಳು ಯಾರು ? (ವರ್ಷವಾರು, ಯೋಜನೆಗಳವಾರು ಸ್ಪಷ್ಟ ಮಾಹಿತಿ ನೀಡುವುದು)

## ಟ್ರೀ ಪಾರ್ಕ್ ನಿರ್ಮಾಣ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೮ (೧೦೩೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ ತಾಲ್ಲೂಕುವಾರು, ಮತ ಕ್ಷೇತ್ರವಾರು ಅರಣ್ಯ ಇಲಾಖೆಯಿಂದ ಟ್ರೀ ಪಾರ್ಕ್ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪ್ರತಿ ಟ್ರೀ ಪಾರ್ಕ್ ನಿರ್ಮಾಣಕ್ಕಾಗಿ ಸರ್ಕಾರ ನೀಡುತ್ತಿರುವ ಅನುದಾನವೆಷ್ಟು ;

(ಇ) ೨೦೧೮–೧೯, ೨೦೧೯–೨೦೨೦ನೇ ಸಾಲಿನಲ್ಲಿ ಒಟ್ಟು ಎಷ್ಟು ಟ್ರೀ ಪಾರ್ಕ್‌ಗಳನ್ನು ನಿರ್ಮಾಣ ಮಾಡಲು ಅನುದಾನ ಬಿಡುಗಡೆ ಮಾಡಲಾಗಿದೆ; ಮಾಡಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಈ) ಬೀದರ್ ಜಿಲ್ಲೆಯ ಎಲ್ಲಾ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಟ್ರೀ ಪಾರ್ಕ್ ನಿರ್ಮಾಣವನ್ನು ಯಾವಾಗ ಮಾಡಲಾಗುವುದು;

(ಉ) ಟ್ರೀ ಪಾರ್ಕ್ ನಿರ್ಮಾಣ ಮಾಡಲು ಇಲಾಖೆಯಿಂದ ಪ್ರಸ್ತಾವನೆ ಬಂದಿದೆಯೇ; ಬಂದಿದ್ದಲ್ಲಿ, ಮಂಜೂರಾತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಬೀದರ್ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೯ (೧೦೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಕಾಮಗಾರಿಗಳಾವುವು; (ವಿಧಾನ ಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗಳ ನಿರ್ವಹಣೆಯನ್ನು ಯಾವ ಸಂಸ್ಥೆಗೆ ವಹಿಸಲಾಗಿದೆ; ಇದಕ್ಕೆ ನಡೆಸಿದ ಟೆಂಡರ್ ಪ್ರಕ್ರಿಯೆಯ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಕಾಮಗಾರಿ ಗುತ್ತಿಗೆ ಪಡೆದ ಗುತ್ತಿಗೆದಾರರು ಇತರ ಸಂಸ್ಥೆಗೆ ಮರು ಗುತ್ತಿಗೆ ನೀಡಲು ಸರ್ಕಾರದಲ್ಲಿ ಅವಕಾಶ ಕಲ್ಪಿಸಲಾಗಿದೆಯೇ; ಕಲ್ಪಿಸಿದ್ದಲ್ಲಿ, ಆದೇಶದ ಪ್ರತಿಯೊಂದಿಗೆ ಮಾಹಿತಿ ನೀಡುವುದು ;

(ಈ) ಈ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಯಿತು ; ಕಾಮಗಾರಿಗಳನ್ನು ಪೂರ್ಣಗೊಳಿಸಲು ಇರುವ ಕಾಲಮಿತಿಯೇನು; ಕಾಮಗಾರಿಗಳ ವಿಳಂಬದಿಂದ ಸರ್ಕಾರಕ್ಕೆ ಆಗಿರುವ ನಷ್ಟವೆಷ್ಟು? (ವಿಧಾನಸಭಾ ಕ್ಷೇತ್ರವಾರು, ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ವನ್ಯಜೀವಿಗಳು ಕಡಿಮೆಯಾಗುತ್ತಿರುವ ಕುರಿತು

**ಶ್ರೀ ಹೆಚ್. ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೯೯೦ (೧೧೮೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವನ್ಯಜೀವಿಗಳ ಸಂಖ್ಯೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಳಿವಿನ ಅಂಚಿನಲ್ಲಿರುವ ವನ್ಯಜೀವಿಗಳ ಸಂರಕ್ಷಣೆಗೆ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಿದೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿನ ವನ್ಯ ಜೀವಿಗಳ ಸಂರಕ್ಷಣೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ವಿವಿಧ ಯೋಜನೆಗಳಿಗೆ ಮಂಜೂರಾದ ಅನುದಾನವೆಷ್ಟು ; (ಯೋಜನಾವಾರು, ವಿಭಾಗವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಮರಣ ಹೊಂದಿರುವ ವನ್ಯಜೀವಿಗಳ ಸಂಖ್ಯೆ ಎಷ್ಟು ; ಅವು ಯಾವುವು ? (ಜಿಲ್ಲಾವಾರು ವಿಭಾಗವಾರು ವಿವರ ನೀಡುವುದು)

## ರಾಜ್ಯದಲ್ಲಿ ಇರುವ ಸಮುದಾಯ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಹೆಚ್. ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೯೯೧ (೧೧೮೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಹಾಗೂ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ; ಹಾಗೂ ವೈದ್ಯರ ಕೊರತೆ ಇರುವ ಕಡೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ವೈದ್ಯರು ಸಮಯಕ್ಕೆ ಸರಿಯಾಗಿ ಕೆಲಸಕ್ಕೆ ಹಾಜರಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಇ) ಕೆಲವು ಆಸ್ಪತ್ರೆಗಳಲ್ಲಿ ಶುಶ್ರೂಷಕಿಯರೆ ವೈದ್ಯರಂತೆ ಕರ್ತವ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದ ಸರ್ಕಾರಿ ಸ್ವಾಮ್ಯದ ಆಯುಷ್ ಅಧ್ಯಯನ ಕೇಂದ್ರಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೯೯೨ (೧೧೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಸ್ವಾಮ್ಯದ ಕೇವಲ ೦೪ ಆಯುಷ್ ಅಧ್ಯಯನ ಕೇಂದ್ರಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹೊಸದಾಗಿ ಆಯುಷ್ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸಲು ಚಿಂತನೆ ಇದೆಯೇ;

(ಆ) ಸರ್ಕಾರಿ ಸ್ವಾಮ್ಯದ ಆಯುಷ್ ಅಧ್ಯಯನ ಕೇಂದ್ರಗಳಲ್ಲಿ ಬೋಧಕ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಆಯುಷ್ ಅಧ್ಯಯನ ಕೇಂದ್ರಗಳ ಅನುದಾನ ರಹಿತ/ಅನುದಾನ ಸಹಿತ ಬೋಧಕ ಸಿಬ್ಬಂದಿಗಳ ವೇತನ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ?

## ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯ ವೈಖರಿ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೯೯೩ (೧೧೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹೆಸರಿನಲ್ಲಿ ಎಷ್ಟು ಆಸ್ತಿ ಇರುತ್ತದೆ; ಇವುಗಳನ್ನು ಶಾಲೆಗಳ ಹೆಸರಿನಲ್ಲಿ ನೋಂದಾಯಿಸದೆ ಇರಲು ಕಾರಣವೇನು; (ಪ್ರತ್ಯೇಕವಾಗಿ ಶಾಲೆಗಳ ವಿವರ ನೀಡವುದು)

(ಆ) ಕಳೆದ ೩ ಆರ್ಥಿಕ ವರ್ಷದಲ್ಲಿ ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯದಲ್ಲಿ ಲೆಕ್ಕ ಪತ್ರಗಳಿಗೆ ಸಂಬಂಧಿಸಿದಂತೆ ಅಡಿಟ್ ಆಗಿದೆಯೇ; ಆಗಿದ್ದಲ್ಲಿ, ಆಕ್ಷೇಪಣೆಗಳು ಇದೆಯೇ; ಇದ್ದರೆ ಅದರ ಮೇಲೆ ಏನು ಕ್ರಮ ಆಗಿದೆ; (ಆಡಿಟ್ ವರದಿ ಪ್ರತಿಯನ್ನು ನೀಡುವುದು)

(ಇ) ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯದಲ್ಲಿ ಶಿಕ್ಷಕೇತರ ಸಿಬ್ಬಂದಿ ಎಷ್ಟು; ಇವರು ಎಷ್ಟು ವರ್ಷಗಳಿಂದ ಇಲ್ಲಿ ಕಾರ್ಯ ಮಾಡುತ್ತಿದ್ದಾರೆ, ಇವರಲ್ಲಿ ಇದೆ ತಾಲ್ಲೂಕಿನ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ೩ ವರ್ಷದ ಅವಧಿಯಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ೧ ರಿಂದ ೧೦ನೇ ತರಗತಿಯಲ್ಲಿ ವ್ಯಾಸಂಗ ಮಾಡಿದ/ಮಾಡುತ್ತಿರುವ ಸರ್ಕಾರಿ ಶಾಲೆಯ ಮಕ್ಕಳ ಸಂಖ್ಯೆ ಎಷ್ಟು; ಇವರಿಗೆ ಎಷ್ಟು ಶೂ ಮತ್ತು ಸಾಕ್ಸ್ ಖರೀದಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಉ) ಕಳೆದ ೩ ವರ್ಷಗಳಲ್ಲಿ ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿ ಈ ತಾಲ್ಲೂಕಿನ ಎಷ್ಟು ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿರುತ್ತಾರೆ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ/ಖಾಸಗಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೯೯೪ (೧೨೨೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ/ಖಾಸಗಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೊಸದಾಗಿ ಅನುಮತಿ ನೀಡಲಾಗಿರುವ ಸರ್ಕಾರಿ/ಖಾಸಗಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಎಷ್ಟು; ಇವುಗಳಿಗೆ ನಿಗಧಿಪಡಿಸಿರುವ ಅಂದಾಜು ಮೊತ್ತ ಎಷ್ಟು;

(ಇ) ಹೊಸದಾಗಿ ಅನುಮತಿ ನೀಡಲಾದ ಸರ್ಕಾರಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಎಷ್ಟು ಪೂರ್ಣಗೊಂಡಿವೆ; ಎಷ್ಟು ಪ್ರಗತಿ ಹಂತದಲ್ಲಿವೆ; ಎಷ್ಟು ಬಾಕಿ ಇವೆ ? (ಸಂಪೂರ್ಣ ವಿವರ ನೀಡುವುದು)

## ಸರ್ಕಾರಿ ಜಿಲ್ಲಾ/ತಾಲ್ಲೂಕು ಆಸ್ಪತ್ರೆಗಳ ಅವ್ಯವಹಾರದ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೯೯೫ (೧೨೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಜಿಲ್ಲಾ/ತಾಲ್ಲೂಕು ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಕೆಲವೊಂದು ಪರೀಕ್ಷೆಗಳನ್ನು ಮಾಡುವಲ್ಲಿ ಖಾಸಗಿ ಲ್ಯಾಬ್‌ಗಳಿಗೆ ಶಿಫಾರಸ್ಸು ಮಾಡುವುದು ಹಾಗೂ ಹೊರಗಿನ ಔಷಧಿ ಮಳಿಗೆಗಳಿಂದ ಔಷಧಿ ಕೊಂಡುಕೊಳ್ಳುವಂತೆ ಸೂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಇದರಿಂದಾಗಿ ಜನಸಾಮಾನ್ಯರಿಗೆ ತೊಂದರೆಯಾಗುತ್ತಿದ್ದು, ಇದನ್ನು ನಿವಾರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಸರ್ಕಾರಿ ಪ್ರಾಥಮಿಕ ಶಾಲೆಗಳ ಸ್ಥಿತಿಗತಿಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):–**

೯೯೬ (೧೨೩೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು; ಪ್ರತಿ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ಬಾಲಕ/ಬಾಲಕಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಶಾಲೆಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; ಎಷ್ಟು ಶಾಲೆಗಳಲ್ಲಿ ಒದಗಿಸಲಾಗಿದೆ; ಹಾಗೂ ಎಷ್ಟು ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವುದಿಲ್ಲ; (ವಿವರ ನೀಡುವುದು)

(ಇ) ಇವುಗಳಲ್ಲಿ ಈವರೆಗೂ ಎಷ್ಟು ಶಾಲೆಗಳನ್ನು ಮುಚ್ಚಲಾಗಿದೆ; ಹಾಗೂ ಎಷ್ಟು ಶಾಲೆಗಳು ಮುಚ್ಚುವ ಹಂತದಲ್ಲಿವೆ;

(ಈ) ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ಸರ್ಕಾರಿ ಆಸ್ಪತ್ರೆಗಳ ವೈದ್ಯರು ಮತ್ತು ಸಿಬ್ಬಂದಿ ಹುದ್ದೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೯೭ (೧೦೫೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ೧೪೬ ತಾಲ್ಲೂಕುಗಳಲ್ಲಿ ತಾಲ್ಲಕುವಾರು ABEYANCE POST ವೈದ್ಯರುಗಳು ಎಷ್ಟು; ಎಲ್ಲಾ ಆಸ್ಪತ್ರೆಗಳಲ್ಲಿ ಈ ವೈದ್ಯರುಗಳನ್ನು ನಿಯೋಜಿಸಲಾಗಿದೆಯೇ ಇದ್ದಲ್ಲಿ, ಮಾಹಿತಿ ನೀಡುವುದು; ಇಲ್ಲವಾದ್ದಲ್ಲಿ, ಯಾವ ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯರುಗಳು ಇರುವುದಿಲ್ಲ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ವ್ಯಾಪ್ತಿಯಲ್ಲಿನ ಎಲ್ಲಾ ಆಸ್ಪತ್ರೆಗಳಲ್ಲಿ ರೆಡಿಯಾಲಿಜಿಸ್ಟ್ ಮತ್ತು ಸ್ಕ್ಯಾನಿಂಗ್ ಡಾಕ್ಟರ್ ವೈದ್ಯರುಗಳನ್ನು ನಿಯೋಜಿಸಲಾಗಿದೆಯೇ ಅಥವಾ ಇಲ್ಲವೇ; (ಪೂರ್ಣ ಮಾಹಿತಿ ನೀಡುವುದು)

(ಇ) ೧೦೦ ಹಾಸಿಗೆ ಹೊಂದಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಪೂರ್ಣ ಪ್ರಮಾಣದ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿರುವ ೧೦೦ ಹಾಸಿಗೆ ಹೊಂದಿರುವ ಆಸ್ಪತ್ರೆಗಳು ಯಾವುವು; (ಮಾಹಿತಿ ನೀಡುವುದು)

(ಈ) ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಚರ್ಮ ಮತ್ತು ಸ್ಕ್ಯಾನಿಂಗ್ ವೈದ್ಯರುಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಲಾಗಿದೆಯೇ ? (ಪೂರ್ಣ ಮಾಹಿತಿ ನೀಡುವುದು)

## ಕಾಡಾನೆಗಳ ದಾಳಿಯಿಂದ ಬೆಳೆ ಹಾನಿ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೯೮ (೧೦೫೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆ ವ್ಯಾಪ್ತಿಯಲ್ಲಿ ೨೦೧೭-೧೮ನೇ ಸಾಲಿನಿಂದ ದಿನಾಂಕ: ೨೪-೦೨-೨೦೨೦ರವರೆಗೆ ಕಾಡು ಪ್ರಾಣಿಗಳ ದಾಳಿಯಿಂದ ಬೆಳೆ ಹಾನಿ, ಜನ-ಜಾನುವಾರುಗಳ ನಷ್ಟದ ಪ್ರಮಾಣ ಎಷ್ಟು; ಇದಕ್ಕೆ ಯಾವ ರೀತಿಯ ಪರಿಹಾರ ನೀಡಲಾಗಿದೆ;

(ಆ) ಈ ಕಾಡು ಪ್ರಾಣಿಗಳು ರೈತರ ಜಮೀನಿಗೆ ಬರದಂತೆ ತಡೆಯಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; ಇವುಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ರೂಪುರೇಷಗಳು ಯಾವುವು ? (ವಿವರ ನೀಡುವುದು)

## ರಾಜೀವ್‌ಗಾಂಧಿ ಆರೋಗ್ಯ ವಿದ್ಯಾಲಯ ಸ್ಥಳಾಂತರಗೊಳ್ಳುವ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೯೯೯ (೧೦೫೫) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರದಿಂದ ರಾಮನಗರಕ್ಕೆ ರಾಜೀವ್‌ಗಾಂಧಿ ಆರೋಗ್ಯ ವಿದ್ಯಾಲಯ ಸ್ಥಳಾಂತರಗೊಳ್ಳುವುದು ಯಾವಾಗ;

(ಆ) ಸ್ಥಳಾಂತರಕ್ಕೆ ಇರುವ ಅಡ್ಡಿ ಆತಂಕಗಳು ಏನು; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಅಕ್ಷರ ದಾಸೋಹ ನೌಕರರ ಬೇಡಿಕೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):-**

೧೦೦೦ (೧೦೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ದಾಸೋಹ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಿಸಿಯೂಟ ಕಾರ್ಯಕರ್ತೆಯರ ಸಂಖ್ಯೆ ಎಷ್ಟು;

(ಆ) ಇವರು ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ;

(ಇ) ಇವರಿಗೆ ನೀಡುತ್ತಿರುವ ವೇತನ ಎಷ್ಟು;

(ಈ) ಇವರು ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಇತ್ತೀಚೆಗೆ ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಅವರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪದವಿ ಪೂರ್ವ ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಯಲ್ಲಿನ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೦೦೧ (೧೦೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಯಲ್ಲಿ ಒಟ್ಟು ಮಂಜೂರಾದ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; ಈ ಹುದ್ದೆಗಳು ಯಾವಾಗನಿಂದ ಖಾಲಿ ಇವೆ;

(ಆ) ಇಲಾಖೆಯ ಜಿಲ್ಲಾ ಉಪನಿರ್ದೇಶಕರ ಹುದ್ದೆ ಎಷ್ಟು; ಖಾಲಿ ಇರುವ ಹುದ್ದೆ ಎಷ್ಟು;

(ಇ) ಇಲಾಖೆಯ ಕೇಂದ್ರ ಕಛೇರಿಯ ಪರೀಕ್ಷಾ ವಿಭಾಗದಲ್ಲಿನ ಖಾಲಿ ಹುದ್ದೆಗಳೆಷ್ಟು;

(ಈ) ಅಧಿಕಾರಿಗಳ ಕೊರತೆಯಿಂದ ಪರೀಕ್ಷಾ ಕಾರ್ಯಕ್ಕೆ ಯಾವುದೇ ರೀತಿಯ ತೊಂದರೆಯಾಗದಂತೆ ಕ್ರಮ ವಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ ?

## ಕರೋನಾ ಪ್ರಕರಣಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೦೦೨ (೧೦೬೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವದಾದ್ಯಂತ ಕರೋನಾ ವೈರಸ್ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದೂವರೆಗೂ ರಾಜ್ಯದಲ್ಲಿ ಎಷ್ಟು ಕರೋನಾ ಸೋಂಕು ಪ್ರಕರಣಗಳು ದಾಖಲಾಗಿವೆ;

(ಇ) ಕೇರಳ ರಾಜ್ಯದಲ್ಲಿ ಸೋಂಕಿತ ಪ್ರಕರಣ ಪತ್ತೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ರಾಜ್ಯದಲ್ಲಿ ಕರೋನಾ ವೈರಸ್ ಪ್ರಕರಣಗಳು ಹರಡದಂತೆ ಕೈಗೊಂಡ ಅಗತ್ಯ ಕ್ರಮಗಳೇನು;

(ಉ) ಈ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಹೆಗ್ಗಡದೇವನ ಕೋಟೆ ತಾಲ್ಲೂಕು ಆಸ್ಪತ್ರೆ ಶಿಥಿಲಾವಸ್ಥೆ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೦೦೩ (೧೦೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೆಗ್ಗಡದೇವನ ಕೋಟೆಯ ತಾಲ್ಲೂಕು ಆಸ್ಪತ್ರೆಯನ್ನು ನೂರು ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆಯೇ; ಪ್ರಸ್ತುತ ಇರುವ ಹಾಸಿಗೆಗಳ ಸಂಖ್ಯೆ ಎಷ್ಟು; ಪ್ರಸ್ತುತ ಇರುವ ಕಟ್ಟಡದ ವಿಸ್ತರಣೆಗೆ ಯೋಜನೆ ರೂಪಿಸಲಾಗಿದೆಯೇ;

(ಆ) ಹಾಲಿ ಇರುವ ಕಟ್ಟಡವು ವಿಸ್ತರಣೆಗೆ ಸೂಕ್ತವಲ್ಲವೆಂದು ಅಡಿಪಾಯ ಭದ್ರವಾಗಿಲ್ಲವೆಂದು ಮಳೆಗಾಲದಲ್ಲಿ ಸೋರುತ್ತಿದ್ದು ಶಿಥಿಲವಾಗಿದೆ ಎಂಬ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನಿರ್ಮಾಣಕ್ಕಾಗಿ ೩೦ ವರ್ಷವಾಗಿರುವ ಈ ಕಟ್ಟಡವನ್ನು ನೆಲಸಮಗೊಳಿಸಿ ಆಧುನಿಕ ಮಾದರಿಯಲ್ಲಿ ನೂತನ ಕಟ್ಟಡ ನಿರ್ಮಿಸಲು ಕ್ರಮ ಜರುಗಿಸಲಾಗುವುದೆ; ಈಗಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಪಕ್ಕದಲ್ಲಿರುವ ಜಾಗದಲ್ಲಿ ಕಟ್ಟಡ ನಿರ್ಮಾಣಕ್ಕೆ ಕ್ರಮ ಜರುಗಿಸಲಾಗುವುದೇ ?

## ಚಿರತೆಗಳ ಹಾವಳಿ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೦೪ (೧೦೪೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶ್ರೀರಂಗಪಟ್ಟಣದ ಸೀತಾಪುರ ಬಳಿ ಕಾವೇರಿ ನದಿಯಲ್ಲಿರುವ ಕಾರೆಕುರ ಬಳಿ ಇರುವ ಬೇವಿನಕುರ ದ್ವೀಪದಲ್ಲಿ ಚಿರತೆಗಳ ಹಾವಳಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈಚೆಗೆ ಈ ದ್ವೀಪದ ಸುತ್ತಮುತ್ತ ಇರುವ ಸೀತಾಪುರ ಮೊದಲಾದ ಹಳ್ಳಿಗಳ ಜಮೀನಿನಲ್ಲಿ ಚಿರತೆಗಳು ೫ ಕುರಿ, ೨ ಸಾಕುನಾಯಿ, ೧೦ಕ್ಕೂ ಹೆಚ್ಚು ಹಸುಗಳನ್ನು ಬೇಟೆಯಾಡಿ ಕೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಚಿರತೆಗಳ ಕಾಟವನ್ನು ತಪ್ಪಿಸಲು ಅರಣ್ಯ ಇಲಾಖೆ ಸೂಕ್ತ ಕ್ರಮ ಕೈಗೊಂಡು ಜಾನುವಾರುಗಳನ್ನು ಕಳೆದುಕೊಂಡವವರಿಗೆ ಪರಿಹಾರ ನೀಡುವುದೇ ?

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಶಾಲೆಗಳ ಖಾತೆ ದಾಖಲೆಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೦೫ (೧೦೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ, ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ನಿವೇಶನ/ಕಟ್ಟಡದ ದಾಖಲಾತಿ, ಖಾತೆ, ಕಂದಾಯದ ಪ್ರಮಾಣ ಪತ್ರಗಳು ದೊರೆಯುತ್ತಿಲ್ಲ;

(ಆ) ಈ ಶಾಲೆಗಳು ಇರುವ ಜಾಗದ ವಿಸ್ತೀರ್ಣ, ಆಟದ ಮೈದಾನದ ವಿಸ್ತೀರ್ಣ, ಚಕ್ಕುಬಂದಿ, ಖಾತೆ ಹಾಗೂ ಕಂದಾಯ ಪ್ರಮಾಣ ಪತ್ರಗಳನ್ನು ಅಧಿಕೃತವಾಗಿ ಪಡೆದುಕೊಂಡು, ಸರ್ವೆ ಮಾಡಿಸಿ, ಅತಿಕ್ರಮಣ ಇದ್ದಲ್ಲಿ ತೆರವುಗೊಳಿಸಿ ಶಾಲೆಗಳ ಜಾಗಕ್ಕೆ ಬೇಲಿ ಅಥವಾ ಕಂಪೌಂಡ್ ಹಾಕಿಸಿ ರಕ್ಷಣೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ; ಈ ಬಗ್ಗೆ ವಿಶೇಷ ಡ್ರೈವ್ ಒಂದನ್ನು ನಡೆಸಲು ಸೂಚಿಸಲಾಗುವುದೇ ?

## E-Waste ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):–**

೧೦೦೬ (೧೨೧೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ವರ್ಷ ಉತ್ಪನ್ನವಾಗುವ E-Waste ಎಷ್ಟು; (ಕಳೆದ ೩ ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರವು ರಾಜ್ಯದಲ್ಲಿ ಮುಂಬರುವ ದಿನಗಳಲ್ಲಿ ಅಂದರೆ ಮುಂದಿನ ೧೦ ವರ್ಷಗಳಲ್ಲಿ ಉತ್ಪಾದನೆ ಆಗುವ E-Waste ಎಷ್ಟು ಎಂದು ಅಂದಾಜಿಸಿದೆಯೇ; ವಿವಿಧ ರೀತಿಯ ಉತ್ಪನ್ನವಾದ E-Wasteನ ಸಂಪೂರ್ಣ ಮಾಹಿತಿ ನೀಡುವುದು;

(ಇ) ರಾಜ್ಯದಲ್ಲಿ E-Wasteಗೆ ಸಂಬಂಧಿಸಿದಂತೆ ನಿರ್ವಹಣೆ ಮಾಡಲು ಒಂದು ಕಾರ್ಖಾನೆಯನ್ನು ಸ್ಥಾಪಿಸುವ ಉದ್ದೇಶವಿದೆಯೇ; ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಈ) ರಾಜ್ಯ ಸರ್ಕಾರವು ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆಯ ಮುಖೇನ ಉತ್ಪನ್ನವಾದ E-Wasteನ್ನು ಉಪಯುಕ್ತವಾಗಿ ಬಳಸಲು ಯಾವುದಾದರೂ ಯೋಜನೆಯನ್ನು ರೂಪಿಸುವ ಚಿಂತನೆ ಇದೆಯೇ; ಇದ್ದಲ್ಲಿ, ಪೂರ್ಣ ಮಾಹಿತಿ ನೀಡುವುದು;

(ಉ) ರಾಜ್ಯದಲ್ಲಿ ಪ್ರತಿ ವರ್ಷವೂ ಉತ್ಪನ್ನವಾಗುತ್ತಿರುವ E-Wasteನ್ನು ಶೇಖರಿಸುವ Dumping Yard ಗಳನ್ನು ಗುರುತಿಸಲಾಗಿದೆಯೇ;

(ಊ) ರಾಜ್ಯದಲ್ಲಿ ಪ್ರತಿ ವರ್ಷ ಉತ್ಪತ್ತಿಯಾಗುವ E-Wasteನಲ್ಲಿ ಎಷ್ಟು ಪ್ರಮಾಣದ E-Wasteಗಳನ್ನು ಮರುಬಳಕೆಗೆ ಬಳಸಲಾಗುತ್ತಿದೆ ಮತ್ತು ಎಷ್ಟು ಪ್ರಮಾಣದ E-Waste ಅನ್ನು Dumping Yard ನಲ್ಲಿ ಹಾಕಲಾಗುತ್ತಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಋ) ರಾಜ್ಯ ಸರ್ಕಾರವು E-Waste ನಿರ್ವಹಣೆಗೆ ಗ್ರಾಮ ಪಂಚಾಯಿತಿ ಮಟ್ಟದಿಂದ ಮಹಾನಗರ ಪಾಲಿಕೆವರೆಗಿನ ಸಂಬಂಧಪಟ್ಟ ಅಧಿಕಾರಿಗಳಿಗೆ ಮತ್ತು ಚುನಾಯಿತ ಪ್ರತಿನಿಧಿಗಳಿಗೆ ತರಬೇತಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಚಿಂತನೆಯಲ್ಲಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲಾ ಮಕ್ಕಳಿಗೆ ಲಿಂಗಸಂವೇದನೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):–**

೧೦೦೭ (೧೨೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲಾ ಮಕ್ಕಳಿಗೆ ಲಿಂಗಸಂವೇದನೆ (Gender Sensitization) ಬಗ್ಗೆ ತಿಳುವಳಿಕೆ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಆ) ರಾಜ್ಯದಲ್ಲಿರುವ ಶಾಲೆಗಳಲ್ಲಿ ೬ನೇ ತರಗತಿಯಿಂದ ೧೨ನೇ ತರಗತಿಯವರೆಗೆ ಕಲಿಯುತ್ತಿರುವ ಹೆಣ್ಣು ಮಕ್ಕಳಿಗೆ ಮುಟ್ಟಿನ ನೈರ್ಮಲ್ಯದ (Menstrual Hygiene) ಬಗ್ಗೆ ಮತ್ತು ಸ್ವಯಂ ಸ್ವಚ್ಛತೆ ಕಾಪಾಡಿಕೊಳ್ಳುವ ಬಗ್ಗೆ ಅರಿವು ಮೂಡಿಸಿ ಶಾಲಾ ವಿದ್ಯಾಭ್ಯಾಸದಲ್ಲಿ ಗಣನೀಯವಾಗಿ ಇಳಿಮುಖವಾಗುತ್ತಿರುವ ವಿದ್ಯಾರ್ಥಿನಿಯರ ಸಂಖ್ಯೆಯನ್ನು ತಡೆಯಲಾಗುವುದೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯದಲ್ಲಿ ಗ್ರಾಮೀಣ ಆರೋಗ್ಯ ಅಭಿಯಾನದಡಿ (NRHM) ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಕುರಿತು

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೦೦೮ (೧೨೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಕ್ಕೆ ರಾಷ್ಟ್ರೀಯ ಗ್ರಾಮೀಣ ಆರೋಗ್ಯ (NRHM) ಅಭಿಯಾನದಡಿ ಪ್ರಾರಂಭವಾದ ವರ್ಷದಿಂದ ಅಂದರೆ ೨೦೧೩-೧೪ರ ಸಾಲಿನಿಂದ ಇಲ್ಲಿಯವರೆಗೆ ವಿವಿಧ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; (ಪೂರ್ಣ ಮಾಹಿತಿ ನೀಡುವುದು)

(ಆ) ಈ ರೀತಿ ಬಿಡುಗಡೆಯಾದ ಅನುದಾನದಲ್ಲಿ ಜಿಲ್ಲಾವಾರು ತಾಲ್ಲೂಕುವಾರು ವಿವಿಧ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದಡಿ ಇದುವರೆವಿಗೂ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರ ಸ್ಥಾಪನೆಯಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಯಡಿ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳನ್ನು ದುರಸ್ತಿ ಮಾಡಲಾಗಿದೆಯೇ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದೆಯೇ; ರಾಜ್ಯ ಸರ್ಕಾರವಾಗಲಿ ಅಥವಾ ಕೇಂದ್ರ ಸರ್ಕಾರದಿಂದ ಅಧ್ಯಯನ ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಅಧ್ಯಯನ ವರದಿಯ ಮುಖ್ಯಾಂಶಗಳೇನು?

## ರಾಜ್ಯದಲ್ಲಿ ಎಂಡೋಸಲ್ಫನ್‌ನಿಂದ ಪೀಡಿತರಾಗಿ ಮೃತಪಟ್ಟವರ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿರುವವರು):–**

೧೦೦೯ (೧೨೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇದುವರೆಗೂ ಎಂಡೋಸಲ್ಫನ್‌ನಿಂದ ಪೀಡಿತರಾಗಿ ಎಷ್ಟು ಜನ ಮೃತಪಟ್ಟಿದ್ದಾರೆ; (ಮಹಿಳೆ, ಮಕ್ಕಳು ಮತ್ತು ಪುರುಷರ ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)

(ಆ) ಮೃತರ ಕುಟುಂಬಗಳಿಗೆ ಸರ್ಕಾರ ಇದುವರೆಗೂ ನೀಡಿರುವ ಪರಿಹಾರವೇನು;

(ಇ) ಎಂಡೋಸಲ್ಫನ್ ಪೀಡಿತರ ಮರು ವಸತಿಗೆ (Rehabitation) ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗಿದ್ದಲ್ಲಿ, ಇದುವರೆಗೂ ಆಗಿರುವ ಪ್ರಗತಿ ಏನು;

(ಈ) ರಾಜ್ಯದಲ್ಲಿ ಎಂಡೋಸಲ್ಫನ್‌ನಿಂದ ತೊಂದರೆಗೊಳಗಾದ ಪ್ರದೇಶಗಳೆಷ್ಟು; ಅವು ಯಾವುವು?

## ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಟ್ಟದಲ್ಲಿ ಶಾಲೆಗಳಿಗೆ ಮಧ್ಯದಲ್ಲಿ ಬಿಟ್ಟು ಹೋಗುವ ವಿದ್ಯಾರ್ಥಿಗಳ ಸಂಖ್ಯೆಯ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೦೧೦ (೧೨೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಟ್ಟದಲ್ಲಿ ಶಾಲೆಗಳಿಂದ ಮಧ್ಯದಲ್ಲಿ ಬಿಟ್ಟು ಹೋದ (Drop out) ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ವಿದ್ಯಾರ್ಥಿಗಳು ಮಧ್ಯದಲ್ಲಿ ಬಿಟ್ಟು ಹೋಗಲು (Drop out) ಕಾರಣಗಳು ಏನೆಂದು ಸರ್ಕಾರ ಗುರುತಿಸಿದೆಯೇ;

(ಇ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಟ್ಟದಲ್ಲಿ ಮಧ್ಯದಲ್ಲಿ ಬಿಟ್ಟು ಹೋಗುವ (Drop out) ಮಕ್ಕಳಲ್ಲಿ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ನಡುವಿನ ಅನುಪಾತವೆಷ್ಟು;

(ಈ) ಕಳೆದ ಮೂರು ವರ್ಷಗಳಲ್ಲಿ ಶಾಲೆಗಳಿಂದ ಬಿಟ್ಟು ಹೋಗುವ ಮಕ್ಕಳಲ್ಲಿ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ನಡುವಿನ ಅನುಪಾತದಲ್ಲಿ ವಿದ್ಯಾರ್ಥಿನಿಯರ ಸಂಖ್ಯೆ ಅತಿ ಹೆಚ್ಚು ಎಂಬುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಉ) ಶಾಲೆಗಳಿಂದ ವಿದ್ಯಾರ್ಥಿಗಳು ಹೊರಗೆ ಉಳಿಯುವುದನ್ನು ತಪ್ಪಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮ ಯೋಜನೆಗಳು ಯಾವುವು? (ಪೂರ್ಣ ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಕುರಿತು

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) :-**

೧೦೧೧ (೧೦೬೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ, ತಾಲ್ಲೂಕು ಆಸ್ಪತ್ರೆ ಹಾಗೂ ಸಮುದಾಯ ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಆ) ಈ ಆಸ್ಪತ್ರೆಗಳಿಗೆ ಮಂಜೂರಾಗಿರುವ ವೈದ್ಯರ ಹುದ್ದೆ ಎಷ್ಟು;

(ಇ) ಪ್ರಸ್ತುತ ಕೆಲಸ ಮಾಡುತ್ತಿರುವ ವೈದ್ಯರ ಸಂಖ್ಯೆ ಎಷ್ಟು; ಖಾಲಿ ಉಳಿದಿರುವ ವೈದ್ಯರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಖಾಲಿ ಉಳಿದಿರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವುದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸವಿತಾ ಸಮಾಜದ ಕುರಿತು

**ಶ್ರೀ ಎಂ.ಸಿ. ವೇಣುಗೋಪಾಲ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೧೨ (೧೧೬೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸವಿತಾ ಸಮಾಜವು ೨ಎ ಹಿಂದುಳಿದ ವರ್ಗಗಳ ಗುಂಪಿಗೆ ಸೇರಿದ್ದು ಈ ಜಾತಿಯನ್ನು “ಹಜಾಮ” ಎಂಬ ರೂಪದಲ್ಲಿ ಉಪಯೋಗಿಸುತ್ತಿದ್ದು, ಈ ಹಿಂದೆ ಸರ್ಕಾರವು ಈ ಪದವನ್ನು ಗೆಜೆಟ್‌ನಿಂದ ತೆಗೆದು ಆದೇಶ ಮಾಡಿದ್ದರೂ ಕೂಡ ಪ್ರಸ್ತುತ ಬಳಕೆಯಲ್ಲಿರುವುದು ಸರಿಯೇ ;

(ಆ) ಈ ಪದವನ್ನು ಬಳಕೆ ಮಾಡುವವರನ್ನು ಶಿಕ್ಷೆಗೆ ಒಳಪಡಿಸಲು ಸಾಧ್ಯವೇ; ಸಾಧ್ಯವಿದ್ದಲ್ಲಿ ಕಾನೂನು ರೂಪಿಸಲಾಗುವುದೇ ?

## ಐ.ಸಿ.ಟಿ ಫೇಸ್–೩ ಯೋಜನೆ

**ಶ್ರೀ ಎಂ.ಸಿ. ವೇಣುಗೋಪಾಲ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೧೩ (೧೧೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಣ ಇಲಾಖೆಯು ಐ.ಸಿ.ಟಿ ಫೇಸ್–೩ ಯೋಜನೆಯ ಪ್ರಕ್ರಿಯೆಯನ್ನು ೨೦೦೮–೦೯ ನೇ ಸಾಲಿನಲ್ಲಿ ಪ್ರಾರಂಭಿಸಿದ್ದರೂ, ಇಲ್ಲಿಯುವರೆಗೂ, ಪೂರ್ಣಗೊಳಿಸದಿರಲು ಪ್ರಮುಖ ಕಾರಣಗಳೇನು;

(ಆ) ಈ ಯೋಜನೆಯಡಿಯಲ್ಲಿ ಕಂಪ್ಯೂಟರ್‌ಗಳನ್ನು ಖರೀದಿಸಿರುವ ಮುನ್ನವೇ ಯು.ಪಿ.ಎಸ್., ಎಲ್.ಸಿ.ಡಿ. ಪ್ರೊಜೆಕ್ಟರ್ ಮತ್ತು ಪ್ರಿಂಟರ್‌ಗಳನ್ನು ಖರೀದಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ಮಾಹಿತಿ ತಂತ್ರಜ್ಞಾನ ಉಪಕರಣಗಳು ಕಾರ್ಯನಿರ್ವಹಿಸುತ್ತಿವೆಯೇ;

(ಇ) ಮೇಲ್ಕಂಡ ಉಪಕರಣಗಳನ್ನು ಸುಸ್ಥಿತಿಯಲ್ಲಿಡಲು ವಾರ್ಷಿಕ ಸೇವಾ ನಿರ್ವಹಣೆ ಗುತ್ತಿಗೆಯನ್ನು ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಈ) ಸದರಿ ಯೋಜನೆಯನ್ನು ಪ್ರಾರಂಭಿಸಿ ಹನ್ನೊಂದು ವರ್ಷಗಳು ಕಳೆದರೂ, ಪೂರ್ಣಗೊಳಿಸದೆ ಶಾಲೆಗಳ ಬಡ ವಿದ್ಯಾರ್ಥಿಗಳು ಕಂಪ್ಯೂಟರ್ ಶಿಕ್ಷಣದಿಂದ ವಂಚಿತರಾಗಲು ಕಾರಣಕರ್ತರಾದ ಇಲಾಖೆಯ ಅಧಿಕಾರಿಗಳ ವಿರುದ್ಧ ಕೈಗೊಳ್ಳಲಾದ ಶಿಸ್ತಿನ ಕ್ರಮವೇನು ?

# ನಿರುದ್ಯೋಗ ಪದವೀಧರರು ಮತ್ತು ಶಿಕ್ಷಣ ನೀತಿ

**ಶ್ರೀ ಎಂ.ಸಿ.ವೇಣುಗೋಪಾಲ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೧೪ (೧೧೬೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ಪದವೀಧರರು ಪದವಿಯನ್ನು ಮುಗಿಸಿ ಹೊರಬರುತ್ತಿದ್ದಾರೆ, (ಇಂಜಿನಿಯರಿಂಗ್, ಮೆಡಿಕಲ್, ಕಾನೂನು ಮುಂತಾದ ಎಲ್ಲಾ ರೀತಿಯ ಪದವಿ ಸೇರಿದಂತೆ ವಿಭಾಗವಾರು ಎಲ್ಲಾ ಪದವೀಧರರುಗಳ ಅಂಕಿ ಅಂಶ ಒದಗಿಸುವುದು)

(ಆ) ಉತ್ತೀರ್ಣರಾಗಿ ಹೊರಬರುತ್ತಿರುವ ಈ ಪದವೀಧರರುಗಳಿಗೆ ಉದ್ಯೋಗ ಕಲ್ಪಿಸಲಾಗುತ್ತಿದೆಯೇ; ಇಲ್ಲವಾದಲ್ಲಿ ಪದವಿ ಮುಗಿಸಿ ಹೊರ ಬಂದಿರುವ ಎಷ್ಟು ಪದವೀಧರರು ನಿರುದ್ಯೋಗಿಗಳಾಗಿದ್ದಾರೆ; ಇದಕ್ಕೆ ಕಾರಣಗಳೇನು; ಮಾನವ ಸಂಪನ್ಮೂಲಗಳ ಬಳಕೆ ಹೇಗೆ ಬಳಸಿಕೊಳ್ಳಲು ಚಿಂತಿಸಲಾಗಿದೆ;

(ಇ) ಪದವಿ ಮುಗಿಸಿ ಹೊರ ಬರುವ ಪ್ರತಿಯೊಬ್ಬ ಪದವೀಧರರು ತಕ್ಷಣ ಉದ್ಯೋಗ ಪಡೆಯುವಂತಾಗಲು ಎಲ್ಲ ಪದವಿ ಕೋರ್ಸ್‌ಗಳಲ್ಲಿ ಅಗತ್ಯತೆ ಮತ್ತು ಬೇಡಿಕೆಗೆ ಅನುಗುಣವಾಗಿ ಪದವೀಧರರನ್ನು ಸೃಷ್ಟಿಸುವ ಬಗ್ಗೆ ಸರ್ಕಾರ ಚಿಂತಿಸುವುದೇ;

(ಈ) ನಿರುದ್ಯೋಗಿಯಾಗಿ ಖಾಲಿ ಇರುವ ಈ ಎಲ್ಲಾ ನಿರುದ್ಯೋಗಿಗಳಿಗೆ ಗೌರವ ವೇತನ ನೀಡಿ ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳಿಗೆ ಇವರ ಸೇವೆಯನ್ನು ಬಳಸಲು ಸರ್ಕಾರ ಚಿಂತಿಸುವುದೇ;

(ಉ) ಈಗಿರುವ ಬೇಡಿಕೆಗೆ ಅನುಗುಣವಾಗಿ ಉದ್ಯೋಗಿಗಳನ್ನು ಸೃಷ್ಟಿಸಲು ಬೇಡಿಕೆ ಇಲ್ಲದ ಪದವಿಗಳನ್ನು ತೆಗೆದು ಬೇಡಿಕೆ ಇರುವ ಹೊಸ ಕೋರ್ಸ್‌ಗಳನ್ನು ಪರಿಚಯಿಸುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಕ್ರಾಂತಿಯನ್ನು ತರಲಾಗುವುದೆ ?

## ಕೊಡಗು ಜಿಲ್ಲೆಯಲ್ಲಿ ಕಾಡಾನೆ-ಮಾನವ ಸಂಘರ್ಷ ತಪ್ಪಿಸಲು ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೧೫ (೧೧೬೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಕಾಡಾನೆ-ಮಾನವ ಸಂಘರ್ಷದಿಂದಾಗಿ ಹಲವಾರು ಸಾವು-ನೋವುಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ವಿಷಯವಾಗಿ ಸರ್ಕಾರ ರೂಪಿಸಿರುವ ಶಾಶ್ವತ ಪರಿಹಾರ ಕ್ರಮಗಳೇನು;

(ಇ) ಇತ್ತೀಚಿನ ದಿನಗಳಲ್ಲಿ ಕಾಡಾನೆ-ಮಾನವ ಸಂಘರ್ಷದ ಪ್ರಕರಣಗಳು ಹೆಚ್ಚಾಗಲು ನೈಜ ಕಾರಣಗಳೇನು ;

(ಈ) ಜಿಲ್ಲೆಯಲ್ಲಿ ಕಾಡಾನೆ-ಮಾನವ ಸಂಘರ್ಷದ ಪ್ರಕರಣಗಳನ್ನು ತಪ್ಪಿಸಲು ಸರ್ಕಾರ ಪ್ರಸಕ್ತ ವರ್ಷದಲ್ಲಿ ಹಾಕಿಕೊಂಡಿರುವ ಕಾರ್ಯಕ್ರಮ ಹಾಗೂ ಯೋಜನೆಗಳೇನು; ಹಾಗೂ ಅವುಗಳಲ್ಲಿ ಅನುಷ್ಠಾನವು ಯಾವ ಹಂತದಲ್ಲಿವೆ?

## ಕೊಡಗು ಜಿಲ್ಲೆಯಲ್ಲಿ ಪ್ರಾಕೃತಿಕ ವಿಕೋಪದ ನಂತರದಲ್ಲಿ ಅರಣ್ಯ ಪುನಶ್ಚೇತನಕ್ಕಾಗಿ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೦೧೬ (೧೧೭೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ೨೦೧೮ ಮತ್ತು ೨೦೧೯ನೇ ವರ್ಷದಲ್ಲಿ ಸತತವಾಗಿ ೨ ವರ್ಷ ಸಂಭವಿಸಿದ ಪ್ರಾಕೃತಿಕ ವಿಕೋಪ ಹಿನ್ನೆಲೆಯಲ್ಲಿ ಅರಣ್ಯ ಪುನಶ್ಚೇತನಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ರೂಪಿಸಿರುವ ಕಾರ್ಯಕ್ರಮ ಹಾಗೂ ಯೋಜನೆಗಳ ವಿವರ ನೀಡುವುದು)

(ಆ) ಈ ಸಂಬಂಧ ೨೦೧೮–೧೯ ಹಾಗೂ ೨೦೧೯–೨೦ನೇ ಸಾಲಿನಲ್ಲಿ ಕೈಗೊಂಡಿರುವ ಕಾಮಗಾರಿಗಳು ಹಾಗೂ ವಿನಿಯೋಗಿಸಿದ ಅನುದಾನವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಬಗ್ಗೆ ಸರ್ಕಾರ ರೂಪಿಸಿರುವ ಸುಸ್ಥಿತಿ ಅರಣ್ಯ ಅಭಿವೃದ್ಧಿಗೆ ಸಂಬಂಧಿಸಿದ ಕಾರ್ಯಕ್ರಮಗಳೇನು ?

## ಬೀದರ್ ಜಿಲ್ಲೆಯ ಸರ್ಕಾರಿ ಶಾಲೆಗಳ ಶೌಚಾಲಯಗಳ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೭ (೧೧೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳು ಎಷ್ಟು; ಎಷ್ಟು ಶಾಲೆಗಳಲ್ಲಿ

ಶೌಚಾಲಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ; ಶೌಚಾಲಯಗಳನ್ನು ನಿರ್ಮಿಸದೇ ಇರುವ ಶಾಲೆಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಲು ಸರ್ಕಾರವು ಕೈಗೊಂಡ ಕ್ರಮವೇನು; ಹಾಗೂ ಇದಕ್ಕಾಗಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ; (ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಆ) ಬೀದರ್ ಜಿಲ್ಲೆಯಲ್ಲಿನ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶದಲ್ಲಿ ಬೀದರ್ ಜಿಲ್ಲೆಯು ಬಹಳ ಹಿಂದುಳಿದಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರವು ಕೈಗೊಂಡಿರುವ ಕ್ರಮವೇನು ?

## ಬೀದರ್ ಜಿಲ್ಲೆಯ ತಾಲ್ಲೂಕು ಆಸ್ಪತ್ರೆಗಳಲ್ಲಿ ಐ.ಸಿ.ಯು ಘಟಕಗಳ ಕುರಿತು

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೮ (೧೯೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಐ.ಸಿ.ಯು. ಘಟಕಗಳು ಇಲ್ಲದೆ ರೋಗಿಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಐ.ಸಿ.ಯು. ಘಟಕಗಳು ಇದ್ದರೂ ಸರಿಯಾಗಿ ಕಾರ್ಯನಿರ್ವಹಿಸದೇ ಇರುವ ಘಟಕಗಳ ಸಂಖ್ಯೆ ಎಷ್ಟು ; ಇವುಗಳನ್ನು ದುರಸ್ಥಿಗೊಳಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಐ.ಸಿ.ಯು ಘಟಕಗಳ ವ್ಯವಸ್ಥೆ ಇಲ್ಲದಿರುವ ತಾಲ್ಲೂಕು ಆಸ್ಪತ್ರೆಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಮಾಹಿತಿ ತಂತ್ರಜ್ಞಾನ ಇಲಾಖೆಯಲ್ಲಿ ಬರುವ ನಿಗಮ ಸಂಸ್ಥೆಗಳ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೦೧೯ (೧೨೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ; ಯಾವುವು; (ವಿವರವಾಗಿ ಇಲಾಖಾವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಡಂತೆ ವಿವರವಾದ ಮಾಹಿತಿ ಕೊಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಯೋಜನೆವಾರು ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಕೇಂದ್ರ ಸರ್ಕಾರದ ಪುರಸ್ಕೃತ / ಪ್ರಾಯೋಜಿತ/ಇತರೆ ಯೋಜನೆಗಳಾವುವು; ಸದರಿ ಯೋಜನೆಗಳಿಗೆ ೨೦೧೯–೨೦ನೇ ಸಾಲಿನಲ್ಲಿ ಎಷ್ಟು ಹಣ ಬಂದಿದೆ; ಇನ್ನೂ ಎಷ್ಟು ಹಣ ಬರಬೇಕಿದೆ; (ಯೋಜನಾವಾರು ಮಾಹಿತಿ ನೀಡುವುದು)

(ಈ) ಇಲಾಖೆಯ ಅಧೀನದಲ್ಲಿ ಬರುವ ಸಂಸ್ಥೆಗಳು ಎಷ್ಟು ಹಣವನ್ನು ಬ್ಯಾಂಕ್‌ನಲ್ಲಿ ಎಫ್.ಡಿ. ಇಟ್ಟಿವೆ; ಎಫ್.ಡಿ ಇಡಲು ಕಾರಣಗಳೇನು; ಈ ಹಣವನ್ನು ಯಾವಾಗ ಉಪಯೋಗಿಸಲಾಗುವುದು ? (ಸಂಸ್ಥೆವಾರು ಮಾಹಿತಿ ನೀಡುವುದು)

## ಕಾರ್ಮಿಕ ಇಲಾಖೆಯಲ್ಲಿ ಸಹಾಯಕ ಹಸ್ತ ಕಾಯಕ ಬಂಧು ಯೋಜನೆಯ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೦೨೦ (೧೨೨೫) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು, ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ ; ಯಾವುವು ; (ವಿವರವಾಗಿ ಇಲಾಖಾವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು ; (ಯೋಜನಾವಾರು ವಿವರವಾದ ಮಾಹಿತಿ ನೀಡುವುದು)

(ಇ) ಕಾರ್ಮಿಕ ಇಲಾಖೆಯ ಅಧೀನದಲ್ಲಿ ಎಷ್ಟು ಕಾರ್ಮಿಕ ನಿಧಿ ಹಣವಿದೆ ; ಇದನ್ನು ಖರ್ಚು ಮಾಡಲು ಇರುವ ಮಾರ್ಗಸೂಚಿಗಳಾವುವು ; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ಹಾಗೂ ಉಳಿದಿರುವ ಹಣವೆಷ್ಟು ;

(ಈ) ಕಾರ್ಮಿಕ ಸಹಾಯ ಹಸ್ತ 'ಕಾಯಕ ಬಂಧು' ಯೋಜನೆ ಜಾರಿಯಲ್ಲಿದೆಯೇ ; ಇದರ ರೂಪು ರೇಷೆಗಳೇನು ; ಇದರ ಸಂಬಂಧ ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲಾಗಿದೆ ; ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಗೆ ನೇಮಕ ಮಾಡಿಕೊಂಡಿರುವವರ ಹೆಸರು, ವಿಳಾಸದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು ;

(ಉ) ಇವರಿಗೆ ಸರ್ಕಾರವು ನೀಡುತ್ತಿರುವ ಸಹಾಯ/ಪ್ರೋತ್ಸಾಹ ಧನವೆಷ್ಟು ?

## ಕನ್ಸಲ್ಟೆಂಟ್ ಪ್ರಾಧ್ಯಾಪಕರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೨೧ (೧೦೬೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ ಇಲಾಖೆ ಸರ್ಕಾರಿ ಆಯುರ್ವೇದ/ಯುನಾನಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಕನ್ಸಲ್ಟೆಂಟ್ ಪ್ರಾಧ್ಯಾಪಕರನ್ನು ಖಾಯಂಗೊಳಿಸುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಆಯುಷ್ ಇಲಾಖೆಯ ಸರ್ಕಾರಿ ಆಯುರ್ವೇದ/ಯುನಾನಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಕನ್ಸಲ್ಟೆಂಟ್ ಪ್ರಾಧ್ಯಾಪಕರನ್ನು ಖಾಯಂಗೊಳಿಸುವ ನಿದರ್ಶನಗಳಿವೆಯೇ ;

(ಇ) ಪ್ರಸ್ತುತ ಆಯುಷ್ ಇಲಾಖೆಯ ಸರ್ಕಾರಿ ಆಯುರ್ವೇದ/ಯುನಾನಿ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಎಷ್ಟು ಕನ್ಸಲ್ಟೆಂಟ್ ಪ್ರಾಧ್ಯಾಪಕರನ್ನು ನೇಮಕಗೊಳಿಸಲಾಗಿದೆ ; ಇವರುಗಳು ಎಷ್ಟು ವರ್ಷದಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ ?

## ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೨೨ (೧೦೬೬) ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಲ್ಲಿರುವ ಸಂಗ್ರಹಿತ ಮೊತ್ತವೆಷ್ಟು; ಈ ಮೊತ್ತದಲ್ಲಿ ಬಳಕೆಯಾದ ಮೊತ್ತವೆಷ್ಟು ; ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (೫ ವರ್ಷಗಳ ವರ್ಷವಾರು ವಿವರ ನೀಡುವುದು)

(ಆ) ನೋಂದಾಯಿತವಾಗಿರುವ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು ; ಇವರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ;

(ಇ) ಕಟ್ಟಡ ಕಾರ್ಮಿಕರ ಸುರಕ್ಷತೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕಟ್ಟಡ ಕಾರ್ಮಿಕ ಕಲ್ಯಾಣ ನಿಧಿಯಿಂದ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಸುರಕ್ಷಾ ಉಪಕರಣಗಳನ್ನು ನೀಡಲಾಗಿದೆಯೇ ; ಇಲ್ಲವಾದಲ್ಲಿ ಯಾವಾಗ ನೀಡಲಾಗುವುದು ?

## ಮಂಗಳೂರು ವಿಶ್ವವಿದ್ಯಾಲಯದ ಅವ್ಯವಹಾರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೨೩ (೧೦೬೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಶ್ವವಿದ್ಯಾಲಯದಲ್ಲಿ ೨೦೧೪ ರಿಂದ ನಡೆದಿರುವ ರೂ. ೧೦೦ ಕೋಟಿ ಮೊತ್ತದ ಹಗರಣಗಳ ಕುರಿತು ವಿಶೇಷ ಅಡಿಟ್ ನಡೆಸಲು ಆದೇಶಿಸಿರುವುದು ಯಾವಾಗ ;

(ಆ) ವಿಶೇಷ ಅಡಿಟ್ ತಂಡವು ಎಂದಿನಿಂದ ಕಾರ್ಯಾರಂಭ ಮಾಡಿದೆ ; ಈ ಅಕ್ರಮಗಳ ಕುರಿತು ಅಡಿಟ್ ನಡೆಸಿ ವರದಿ ಸಲ್ಲಿಸಲು ಎಷ್ಟು ದಿನಗಳ ಕಾಲಮಿತಿಯನ್ನು ನಿಗದಿಪಡಿಸಲಾಗಿದೆ ;

(ಇ) ೨೦೧೪ ರಿಂದ ಮಂಗಳೂರು ವಿಶ್ವವಿದ್ಯಾಲಯದ ಆಯವ್ಯಯಗಳ ಸಂಪೂರ್ಣ ಲೆಕ್ಕ ಪತ್ರವನ್ನು ಪರಿಶೀಲಿಸಲಾಗುತ್ತದೆಯೇ ; ಅಥವಾ ನಿಗದಿತ ಆರೋಪಗಳ ಕುರಿತು ಆಡಿಟ್ ಅನ್ನು ಮಾಡಲಾಗುವುದೇ ?

## ಸರ್ಕಾರಿ ಸೀಟು ಪಡೆದ ವೈದ್ಯರು ಪಾವತಿಸಬೇಕಾದ ದಂಡದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೨೪ (೧೦೬೮) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಡ್ಡಾಯ ಸರ್ಕಾರಿ ಸೇವೆಯಿಂದ ಬಿಡುಗಡೆ ಹೊಂದಲು ಸರ್ಕಾರಿ ಸೀಟು ಪಡೆದ ವೈದ್ಯರು ಪಾವತಿಸಬೇಕಾದ ದಂಡದ ಮೊತ್ತವೆಷ್ಟು ; ಈ ಕುರಿತು ನಿಯಮಗಳೇನು ; ದಂಡ ಪಾವತಿಯಲ್ಲಿ ವಿನಾಯಿತಿ ನೀಡಲು ಇರುವ ನಿಯಮಗಳೇನು ; ಪ್ರತಿಯನ್ನು ಒದಗಿಸುವುದು ;

(ಆ) ಕಳೆದ ೩ ವರ್ಷಗಳಲ್ಲಿ ಈ ರೀತಿಗಾಗಿ ಪಾವತಿಸಿ ಕಡ್ಡಾಯ ಸರ್ಕಾರಿ ಸೇವೆಯಿಂದ ವಿನಾಯಿತಿ ಪಡೆದ ವೈದ್ಯರ ಸಂಖ್ಯೆ ಎಷ್ಟು ; (ಹೆಸರು, ವಿಳಾಸದೊಂದಿಗೆ ಅವರು ಪಾವತಿಸಿದ ದಂಡದ ಕುರಿತು ಮಾಹಿತಿಯನ್ನು ನೀಡುವುದು)

(ಇ) ದಂಡವನ್ನು ಪಾವತಿಸದೆ ಕಡ್ಡಾಯ ಸರ್ಕಾರಿ ಸೇವೆಯಿಂದ ವಿನಾಯಿತಿಯನ್ನು ಪಡೆಯಲು ಇರುವ ಅವಕಾಶಗಳೇನು ; ಈ ಅವಕಾಶಗಳನ್ನು ಬಳಸಿ ಎಷ್ಟು ವೈದ್ಯರು ಕಡ್ಡಾಯ ಸರ್ಕಾರಿ ಸೇವೆಯಿಂದ ಬಿಡುಗಡೆ ಹೊಂದಿರುತ್ತಾರೆ ; ದಂಡ ಪಾವತಿ ಕಡ್ಡಾಯ ಸರ್ಕಾರಿ ಸೇವೆಯಿಂದ ಬಿಡುಗಡೆ ಹೊಂದಲು ಇರುವ ಅವಕಾಶವನ್ನು ರದ್ದುಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ ; ಇಲ್ಲವಾದಲ್ಲಿ, ಈ ಕುರಿತು ಯಾವಾಗ ಕ್ರಮ ಕೈಗೊಳ್ಳಲಾಗುವುದು ;

(ಈ) ದಂಡವನ್ನು ಪಾವತಿಸದೆ ಕಡ್ಡಾಯ ಸರ್ಕಾರಿ ಸೇವೆಯನ್ನು ಮಾಡದಿರುವ ವೈದ್ಯರ ಪ್ರಾಕ್ಟೀಸ್ ಲೈಸನ್ಸ್ ರದ್ದು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ದಂಡವನ್ನು ಪಾವತಿಸದ ಎಷ್ಟು ವೈದ್ಯರ ಪ್ರಾಕ್ಟೀಸ್ ಲೈಸನ್ಸ್ ರದ್ದುಗೊಳಿಸಲಾಗಿದೆ ; (ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಉ) ಸರ್ಕಾರಿ ಸೀಟು ಪಡೆದ ವಿದ್ಯಾರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಲೇಬೇಕು ಎಂಬ ನಿಯಮ ರೂಪಿಸುವ ಬಗ್ಗೆ ಸರ್ಕಾರದ ನಿಲುವೇನು ?

## ಖಾಸಗಿ ಶಿಕ್ಷಣ ಸಂಸ್ಥೆಗಳ ಅಧಿಕ ಶುಲ್ಕಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೦೨೫ (೧೦೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರವು ಯಾವ ಯಾವ ರಿಯಾಯಿತಿ ಸೌಲಭ್ಯಗಳನ್ನು ನೀಡುತ್ತಿದೆ ;

(ಆ) ಆಂಗ್ಲ ಮಾಧ್ಯಮದ ಶಿಕ್ಷಣ ಸಂಸ್ಥೆಗಳು ಲಕ್ಷ ಲಕ್ಷಗಳ ಶುಲ್ಕಗಳನ್ನು ಮಕ್ಕಳಿಂದ ಸಂಗ್ರಹಿಸುತ್ತಿದ್ದು, ಈ ಆದಾಯಕ್ಕೆ ಯಾವ ರೀತಿಯ ತೆರಿಗೆಯನ್ನು ಸರ್ಕಾರ ನಿಗದಿ ಪಡಿಸಿದೆ ; ಆಂಗ್ಲ ಮಾಧ್ಯಮದ ಶಿಕ್ಷಣ ಸಂಸ್ಥೆಗಳು ಯಾವ ಯಾವ ರೀತಿಯ ಶುಲ್ಕಗಳನ್ನು ಸಂಗ್ರಹಿಸಬಹುದು ; ಸದರಿ ಶುಲ್ಕಗಳ ಗರಿಷ್ಟ ಮಿತಿಯೇನು ;

(ಇ) ಖಾಸಗಿ ಶಿಕ್ಷಣ ಸಂಸ್ಥೆಗಳು ತಮ್ಮ ಶಿಕ್ಷಣ ಸಂಸ್ಥೆಯಲ್ಲಿ ವಿವಿಧ ರೀತಿಯ ಸೌಲಭ್ಯಗಳನ್ನು ನೀಡುವುದಾಗಿ ಸುಳ್ಳು ಜಾಹೀರಾತುಗಳನ್ನು ನೀಡಿ ಮಕ್ಕಳ ಪೋಷಕರನ್ನು ಆಕರ್ಷಿಸುವ ಪ್ರಯತ್ನ ಮಾಡುವ ಬಿಸಿನೆಸ್ ಸೆಂಟರ್‌ಗಳ ರೂಪದಲ್ಲಿ ಕಾರ್ಯ ನಿರ್ವಹಿಸುತ್ತಿರುವುದರಿಂದ ಅಂತಹ ಸಂಸ್ಥೆಗಳ ಮೇಲೆ ಮಾರಾಟ ತೆರಿಗೆ, ಆದಾಯ ತೆರಿಗೆ ಮುಂತಾದ ತೆರಿಗೆಗಳನ್ನು ವಿಧಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಅತಿಥಿ ಉಪನ್ಯಾಸಕರ ಬೇಡಿಕೆಗಳ ಕುರಿತು

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–**

೧೦೨೬ (೧೧೯೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ದಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪಿ.ಹೆಚ್.ಡಿ. ಹೊಂದದೇ ಇರುವವರಿಗೆ ಪ್ರಸ್ತುತ ನೀಡುತ್ತಿರುವ ವೇತನ ರೂ. ೧೧,೦೦೦/– ಗಳು ಪಿ.ಹೆಚ್.ಡಿ. ಹೊಂದಿದವರಿಗೆ ರೂ. ೧೩,೦೦೦/–ಗಳಾಗಿದ್ದು, ಇದನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಪದವಿ ಕಾಲೇಜುಗಳಲ್ಲಿ ಪ್ರಸ್ತುತ ನೇಮಕ ಮಾಡಿಕೊಳ್ಳಲಿರುವ ಸುಮಾರು ೧೭೫೦ ಸಹಾಯಕ ಪ್ರಾಧ್ಯಾಪಕ ಹುದ್ದೆಯ ನೇಮಕಾತಿಯಲ್ಲಿ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡಲು ಸರ್ಕಾರ ಚಿಂತನೆ ನಡೆಸಿದೆಯೇ ? (ಮಾಹಿತಿ ನೀಡುವುದು)

## ಪ್ರಾಥಮಿಕ/ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳ ಕೊರತೆ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೭ (೧೨೦೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಹುತೇಕ ಕಡೆಗಳಲ್ಲಿ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ಗ್ರಾಮೀಣ ಪ್ರದೇಶಗಳ ಬಡ ಜನರಿಗೆ ಉತ್ತಮ ಚಿಕಿತ್ಸೆ ದೊರೆಯದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಸದರಿ ಸಮುದಾಯ ಕೇಂದ್ರಗಳಿಗೆ ಅಗತ್ಯ ವೈದ್ಯರ ಹಾಗೂ ಸಿಬ್ಬಂದಿಗಳ ನೇಮಕಾತಿ ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ ; ಇದಕ್ಕೆ ಬೇಕಾದ ಕಾಲಾವಕಾಶ ಎಷ್ಟು ?

## ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕೊರತೆ ಇರುವ ಶಿಕ್ಷಕರ ನೇಮಕಾತಿ ಮಾಡುವ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೨೮ (೧೨೦೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದಾಗಿ ಶಾಲಾ ಮಕ್ಕಳ ಶೈಕ್ಷಣಿಕ ಗುಣಮಟ್ಟ ಕಡಿಮೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಆ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಅಗತ್ಯ ಶಾಲಾ ಶಿಕ್ಷಕರ ನೇಮಕಾತಿ ಮಾಡಲು ಸರ್ಕಾರವು ಕ್ರಮಗೊಳ್ಳುವುದೇ ; ಇದಕ್ಕೆ ಬೇಕಾಗುವ ಕಾಲಾವಧಿ ಎಷ್ಟು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0252/400 ಪ್ರತಿಗಳು/06–03–2020